ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ದಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 ಸಂಪುಟ: 05 | Issue: 58 ಸಂಚಿಕೆ: 58 | Date: 13-03-2026 Friday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

ಹೈಕಮಾಂಡ್ ಸೂಚನೆ ನೀಡಿದರೆ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ

ನಾಯಕತ್ವ ಗೊಂದಲಕ್ಕೆ ಹೈಕಮಾಂಡ್ ಪರಿಹಾರ..?

ಬೆಂಗಳೂರು: ರಾಜ್ಯ ವಿಧಾನಸಭೆಯ ಬಜೆಟ್ ಅಧಿವೇಶನ ನಡೆಯುತ್ತಿರುವ ನಡುವೆಯೇ ಕರ್ನಾಟಕ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಕುರಿತು ರಾಜಕೀಯ ಚರ್ಚೆಗಳು ಜೋರಾಗಿವೆ. ಮಾರ್ಚ್ 27ರಂದು ಅಧಿವೇಶನ ಮುಕ್ತಾಯವಾದ ಬಳಿಕ ಕಾಂಗ್ರೆಸ್ ಹೈಕಮಾಂಡ್ ನಾಯಕತ್ವ ಬದಲಾವಣೆ ವಿಚಾರ ಕುರಿತ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಪಕ್ಷದ ಉನ್ನತ ನಾಯಕತ್ವವು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ.

ಇತ್ತೀಚೆಗೆ ಆರು ವರ್ಷಗಳ ಕಾಲ ರಾಜ್ಯ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿರುವುದನ್ನು ಗುರುತಿಸಿ ಶಾಸಕರಿಗೆ ಔತಣ ಕೂಟ ನೀಡಿದ ಡಿಕೆ.ಶಿವಕುಮಾರ್ ಅವರು, ಹೈಕಮಾಂಡ್ ಸೂಚನೆ ನೀಡಿದರೆ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂದು ತಿಳಿಸಿದ್ದು, ಈ ಹೇಳಿಕೆ ಕುತೂಹಲವನ್ನು ಮೂಡಿಸಿದೆ. ನಾಯಕತ್ವ ವಿಚಾರದಲ್ಲಿ ಕಾಂಗ್ರೆಸ್



ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಅಖಿಲ ಭಾರತೀಯ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಡುವೆ ಚರ್ಚೆಗಳು ನಡೆದಿವೆ ಎಂಬ ಮಾಹಿತಿ ಲಭ್ಯವಾಗಿದೆ. ಮತ್ತೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲಿಗರು ಸಚಿವ ಸಂಪುಟ ಪುನರ್‌ರಚನೆಗೆ ಉನ್ನತ ನಾಯಕತ್ವದ ಅನುಮತಿ ಪಡೆಯುವ ನಿರೀಕ್ಷೆಯಲ್ಲಿದ್ದಾರೆ. ಆದರೆ, ಶಿವಕುಮಾರ್ ಬೆಂಬಲಿಗರು ಮುಖ್ಯಮಂತ್ರಿ ಸ್ಥಾನದಲ್ಲೇ ಬದಲಾವಣೆ ಆಗಬಹುದು ಎಂದು ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ. ಈ ನಡುವೆ ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರ ನೇತೃತ್ವದಲ್ಲಿ ಸುಮಾರು 25–30 ಹಿರಿಯ ಕಾಂಗ್ರೆಸ್ ಶಾಸಕರು ಗುರುವಾರ ಸಂಜೆ ಭೋಜನ ಕೂಟದಲ್ಲಿ ಸಭೆ ಸೇರಿ ಸಂಪುಟ ಸ್ಥಾನಕ್ಕಾಗಿ ಹಕ್ಕು ಮಂಡಿಸಲಿದ್ದಾರೆಂದು ತಿಳಿದುಬಂದಿದೆ.

ಮೊದಲ ಬಾರಿಗೆ ಶಾಸಕರಾದವರು ಸಂಪುಟದಲ್ಲಿ ಸೇರ್ಪಡೆಯಾಗವು ಲಾಬಿ ನಡೆಸುತ್ತಿದ್ದಾರೆ. ಅವರಿಗೆ ಸಾಧ್ಯವಾಗುವುದಾದರೆ, 3–4 ಬಾರಿ ಗೆದ್ದಿರುವ ನಮಗೇಕೆ ಹಕ್ಕು ಮಂಡಿಸಲು ಸಾಧ್ಯವಿಲ್ಲ? ನಾವು ಇದನ್ನು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗೆ ತಿಳಿಸುತ್ತೇವೆ. ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ದೆಹಲಿಗೆ ಹೋಗುತ್ತೇವೆ ಎಂದು ಬೇಳೂರು ಗೋಪಾಲಕೃಷ್ಣ ಅವರು ತಿಳಿಸಿದ್ದಾರೆ.

ಕೇಂದ್ರ ತಂಡದಿಂದ ಪಿಎಂ ವಿಶ್ವಕರ್ಮ, ಸ್ವನಿಧಿ ಯೋಜನೆಯಡಿ

25 ಸಾವಿರಕ್ಕೂ ಹೆಚ್ಚು ಮಂದಿಗೆ ಸಾಲ ಸೌಲಭ್ಯ – ಜಿಲ್ಲಾಧಿಕಾರಿ ಶುಭ ಕಲ್ಯಾಣ್

ಶಿರಾ : ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳಿಂದ ಪ್ರತಿಯೊಬ್ಬ ಬೀದಿ ಬದಿ ವ್ಯಾಪಾರಿಗಳಿಗೂ ಸರಕಾರದ ಸೌಲಭ್ಯ ತಲುಪಬೇಕು. ಅರ್ಹರಿಗೆ ಸಾಲ ಸೌಲಭ್ಯ ಸಿಗಬೇಕು. ಅದರಿಂದ ಅವರು ಹೆಚ್ಚು ವ್ಯಾಪಾರ ಮಾಡಿ ಆರ್ಥಿಕವಾಗಿ ಸಬಲರಾಗಬೇಕು ಎಂಬುದೇ ಸರ್ಕಾರಗಳ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು. ಅವರು ಬುಧವಾರ ನಗರದ ಹೂವಿನ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆ ಬಳಿ ಬೀದಿ ಬದಿ ವ್ಯಾಪಾರಸ್ಥರೊಂದಿಗೆ ಯೋಜನೆಗಳ ಬಗ್ಗೆ ಸಂವಾದ ನಡೆಸಿ ಮಾತನಾಡಿದರು. ಕೇಂದ್ರ ಸರಕಾರದ ವಿಶ್ವಕರ್ಮ ಯೋಜನೆ, ಸ್ವನಿಧಿ ಯೋಜನೆ ಹಾಗೂ ಪ್ರಧಾನಮಂತ್ರಿ ನಗರ ಆವಾಸ್ ಯೋಜನೆಗಳಿಂದ ಫಲಾನುಭವಿಗಳಿಗೆ ಉತ್ತಮ ಅನುಕೂಲಗಳು ದೊರಕಿದ್ದು, ಪಿಎಂ ವಿಶ್ವಕರ್ಮ ಹಾಗೂ ಸ್ವನಿಧಿ ಯೋಜನೆಗಳಿಂದ ತುಮಕೂರು ಜಿಲ್ಲೆಯಲ್ಲಿ 25 ಸಾವಿರಕ್ಕೂ ಹೆಚ್ಚು ಜನ ಸಾಲ ಸೌಲಭ್ಯ ಪಡೆದಿದ್ದಾರೆ. ಪಿಎಂ ವಿಶ್ವಕರ್ಮ ಮತ್ತು ಸ್ವನಿಧಿ ಯೋಜನೆಯಿಂದ



ಅನುಕೂಲ ಪಡೆದ ಫಲಾನುಭವಿಗಳು ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸಲು ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ ಎಂದ ಅವರು ಬ್ಯಾಂಕಿನವರು ಫಲಾನುಭವಿಗಳಿಗೆ ಯಾವುದೇ ಅಡಮಾನ ಇಲ್ಲದೆ ಸಾಲ ನೀಡಬೇಕೆಂದು ತಿಳಿಸಿದ್ದೇವೆ. ಇದಕ್ಕೆ ಬ್ಯಾಂಕಿನವರು ಸ್ಪಂದನೆ ಮಾಡಬೇಕು. ಜಿಲ್ಲೆಯಲ್ಲಿ ಇದುವರೆಗೂ ಸುಮಾರು 25000 ಜನ ಸಾಲ ಪಡೆದಿದ್ದಾರೆ. ಅದರಲ್ಲಿ ಶೇ. 70 ರಷ್ಟು ಹಣ ಮರುಪಾವತಿ ಮಾಡಿದ್ದಾರೆ ಎಂದು ತಿಳಿಸಿದರು.

ಇದೇ ಸಂದರ್ಭ ಶಿರಾ ನಗರದ ಹೂವಿನ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆ ಬಳಿ ಬೀದಿ ಬದಿ ವ್ಯಾಪಾರಸ್ಥರೊಂದಿಗೆ ಯೋಜನೆಗಳ ಬಗ್ಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಕೇಂದ್ರ ತಂಡದ ಉಪಕಾರ್ಯದರ್ಶಿ ಶುಕ್ಲ, ಉಪವಿಭಾಗಾಧಿಕಾರಿ ಶಿವಪ್ಪ, ತಹಶೀಲ್ದಾರ್ ಆನಂದ್ ಕುಮಾರ್, ನಗರಸಭೆ ಅಧ್ಯಕ್ಷ ಜೀಷಾನ್ ಮೊಹಮೂದ್, ಉಪಾಧ್ಯಕ್ಷ ಲಕ್ಷ್ಮಿಕಾಂತ್, ಪೌರಾಯುಕ್ತ ರುದ್ರೇಶ್. ಕೆ, ತಾ.ಪಂ.ಇಒ ಹರೀಶ್, ನಗರಸಭೆ ಸದಸ್ಯರಾದ ಉಮಾ ವಿಜಯರಾಜ್, ಸೇರಿದಂತೆ ಹಲವರು ಹಾಜರಿದ್ದರು.

ಸೂರ್ಯ ಪ್ರಗತಿ
ಕನ್ನಡ ದಿನ ಪತ್ರಿಕೆ

ಅಡುಗೆ ಅನಿಲ ಬೆಲೆ ಏರಿಕೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

ಕೇಂದ್ರ ಸರ್ಕಾರದ ಆಡಳಿತ ವೈಫಲ್ಯಕ್ಕೆ ಮುಖಂಡರ ಆಕ್ರೋಶ

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು: ಅಡುಗೆ ಅನಿಲ ದರಏರಿಕೆ ಖಂಡಿಸಿ, ಬೆಲೆ ಏರಿಕೆಗೆ ಕೇಂದ್ರ ಸರ್ಕಾರದ ಆಡಳಿತ ವೈಫಲ್ಯವೇ ಕಾರಣವೆಂದು ಆಪಾದಿಸಿ, ಸರ್ಕಾರದ ವಿರುದ್ಧ ಜಿಲ್ಲಾ ಕಾಂಗ್ರೆಸ್ ಮುಖಂಡರು ಗುರುವಾರ ನಗರದ ಬಿಜಿಎಸ್ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಡಾ.ಎಸ್.ರಫೀಕ್‌ಅಹ್ಮದ್ ಮಾತನಾಡಿ, ಮಧ್ಯ ಪ್ರಾಚ್ಯ ಯುದ್ಧದ ಪರಿಣಾಮ ಅಡುಗೆ ಅನಿಲದ ಸಮಸ್ಯೆಎದುರಾಗಿದೆ. ಯುದ್ಧದ ನಡೆಯುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಗೊತ್ತಿದ್ದರೂ ಯಾವುದೇ ಪೂರ್ವ ತಯಾರಿ ಮಾಡಿಕೊಳ್ಳದ ಕಾರಣ ಇಂದು ಜನ ಸಾಮಾನ್ಯರಿಗೆ ಅಡುಗೆ ಅನಿಲದ ಸಮಸ್ಯೆ ಎದುರಾಗಿದೆ. ಈ ನಡುವೆ ಸರ್ಕಾರ ಅಡುಗೆ ಅನಿಲ ಬೆಲೆ ಹೆಚ್ಚಳ ಮಾಡಿ ಗಾಯದ ಮೇಲೆ ಬರೆ ಎಳೆದಿದೆ. ಕೆಲವು ಕಡೆ ಹೆಚ್ಚು ಹಣ ಕೊಟ್ಟರೂ ಅನಿಲ ಸಿಲಿಂಡರ್ ಸಿಗದಂತಹ ಪರಿಸ್ಥಿತಿ ಎದುರಾಗಿದೆ ಎಂದರು.

ಯುದ್ಧ ಹೀಗೆ ಮುಂದುವರೆದರೆ ಪೆಟ್ರೋಲ್, ಡೀಸೆಲ್ ಬೆಲೆಯೂ ಹೆಚ್ಚಾಗುವ ಆತಂಕವಿದೆ. ಇಂಧನದರ ಹೆಚ್ಚಿದರೆ ಸರಕು ಸಾಗಾಣಿಕೆ ವೆಚ್ಚ ಅಧಿಕವಾಗಿ ಎಲ್ಲಾ ಪದಾರ್ಥಗಳ ಬೆಲೆ ಹೆಚ್ಚಾಗಿ ಜನ ಸಾಮಾನ್ಯರಿಗೆ ಹೊರೆಯಾಗುತ್ತದೆ. ಇದೆಲ್ಲವೂ ಪ್ರಧಾನಿ ಮೋದಿ ಸರ್ಕಾರದ ಆಡಳಿತ ವೈಫಲ್ಯದ ಫಲ. ಕೇಂದ್ರ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಸಮಸ್ಯೆಗಳನ್ನು ಪರಿಹರಿಸಬೇಕು, ಇಲ್ಲವೇ ಪ್ರಧಾನಿ ಮೋದಿ ರಾಜೀನಾಮೆ ನೀಡಿ ಮನೆಗೆ ಹೋಗಬೇಕು ಎಂದು ಡಾ.ರಫೀಕ್‌ಅಹ್ಮದ್ ಒತ್ತಾಯಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರಗೌಡ ಮಾತನಾಡಿ, ನಮ್ಮದೇಶದ ಆಡಳಿತ ಎತ್ತ ಸಾಗುತ್ತಿದೆ? ಅಡುಗೆ ಅನಿಲದ ಬೆಲೆ ಹೆಚ್ಚಳ ಮಾಡಿ, ಅನಿಲ ಅಭಾವ ಸೃಷ್ಟಿಯಾಗಿ ಜನರು ತೊಂದರೆ ಅನುಭವಿಸುತ್ತಿದ್ದರೂ ಯಾವುದೇ ಪರಿಹಾರ ಕ್ರಮ ತೆಗೆದುಕೊಳ್ಳದ ಮೋದಿ ಸರ್ಕಾರಕ್ಕೆ ಧಿಕ್ಕಾರ ಎಂದರು.



ಕಾಂಗ್ರೆಸ್ ಆಡಳಿತವನ್ನು ಟೀಕಿಸುತ್ತಾ ಬಂದಿರುವ ಬಿಜೆಪಿಯವರು, ಕಾಂಗ್ರೆಸ್ ಆಡಳಿತದಲ್ಲಿ ಯಾವತ್ತೂ ಇಂತಹ ದುಸ್ಥಿತಿ ಬಂದಿರಲಿಲ್ಲ, ಕೇಂದ್ರದ ಮೋದಿ ಸರ್ಕಾರದೇಶವನ್ನು 50 ವರ್ಷಗಳ ಹಿಂದಕ್ಕೆ ತೆಗೆದುಕೊಂಡು ಹೋಗಿದೆ ಎಂದು ಟೀಕಿಸಿದರು.

ಮುಖಂಡ ಇಕ್ಬಾಲ್‌ಅಹ್ಮದ್ ಮಾತನಾಡಿ, ಅಮೆರಿಕಾ ಅಧ್ಯಕ್ಷ ಟ್ರಂಪ್ ಹೇಳಿದಂತೆ ನಡೆದು ಕೊಳ್ಳುವ ಪ್ರಧಾನಿ ನರೇಂದ್ರ ಮೋದಿಯವರಿಗೆ ದೇಶದ ಜನರ ಹಿತ ಬೇಕಾಗಿಲ್ಲ, ಅಡುಗೆ ಅನಿಲ ದರ ಏರಿಸಿ ಜನರಿಗೆ ಹೊರೆ ಮಾಡುತ್ತಿರುವ ಕೇಂದ್ರ ಸರ್ಕಾರ ಮತ್ತೆಎತ್ತಿನಗಾಡಿ, ಜಟಕಾಗಾಡಿ, ಸೌದೆ ಒಲೆ ವ್ಯವಸ್ಥೆಗೆ ಜನರನ್ನು ಒಯ್ಯುತ್ತಿದೆ. ಇದೇನಾ ಇವರ ವಿಕಸಿತ ಭಾರತ? ಎಂದು ಟೀಕೆ ಮಾಡಿದರು.

ದೇಶಕ್ಕೆ ಗಂಡಾಂತರ ಬಂದಿರುವ ಸಂದರ್ಭದಲ್ಲಿ ವಿದೇಶಾಂಗ ನೀತಿಯನ್ನು ಸರಿಪಡಿಸಿ ಜನರ ಸಮಸ್ಯೆಗೆ ಸ್ಪಂದಿಸಬೇಕು, ಆಗದಿದ್ದರೆ ರಾಜೀನಾಮೆ ಕೊಟ್ಟು ಅಧಿಕಾರ ತ್ಯಜಿಸಿರಿ ಎಂದು ಒತ್ತಾಯಿಸಿದರು. ಮುಖಂಡ ಎನ್.ಗೋವಿಂದರಾಜು ಮಾತನಾಡಿ, ಅಗತ್ಯ ಸೇವೆಗಳಲ್ಲಿ ಒಂದಾದ ಅಡುಗೆ ಅನಿಲಕ್ಕೆ ಹಾಹಾಕಾರ ಸೃಷ್ಟಿಯಾಗಿರುವ ಸಂದರ್ಭದಲ್ಲಿ ಕೇಂದ್ರ ಸರ್ಕಾರ ತುರ್ತು ಕ್ರಮ ತೆಗೆದುಕೊಂಡು ಜನರ ತೊಂದರೆ ನಿವಾರಣೆ ಮಾಡಬೇಕು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಟಿ.ಎಂ.ಮಹೇಶ್, ಫಯಾಜ್ ಅಹ್ಮದ್, ನಗರಪಾಲಿಕೆ ಮಾಜಿ ಸದಸ್ಯ ಸೈಯದ್ ನಯಾಜ್ ಅಹ್ಮದ್, ಮುಖಂಡರಾದ ಷಣ್ಮುಖಪ್ಪ, ರೇವಣ್ಣಸಿದ್ಧಯ್ಯ, ಕೆಂಪಣ್ಣ, ಮೆಹಬೂಬ್ ಪಾಷಾ, ಆಟೋರಾಜು, ಬಿ.ಜಿ.ನಿಂಗರಾಜು, ಸುಜಾತ, ಅಂಬರೀಷ್, ಶಿವಾಜಿ, ನಟರಾಜಶೆಟ್ಟಿ, ಪಂಡಿತ್ ನಾರಾಯಣಪ್ಪ, ಜ್ವಾಲಮಾಲ ರಾಜಣ್ಣ, ಭಾಗ್ಯಮ್ಮ, ನಾಗಮಣಿ, ಕೆಂಪರಾಜು, ನಾಗಮಣಿ, ವಿಜಯಲಕ್ಷ್ಮಿ, ವೆಂಕಟೇಶ್, ಬೈಲಾಸ್ವಾಮಿ, ಕೈದಾಳ ರಮೇಶ್ ಮೊದಲಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಏಪ್ರಿಲ್ 3ಕ್ಕೆ ಮಧುಗಿರಿಗೆ ಸಿಎಂ

ವಿವಿಧ ಅಭಿವೃದ್ಧಿ ಯೋಜನೆ ಕಾಮಗಾರಿಗಳ ಉದ್ಘಾಟನೆ



ಮಧುಗಿರಿ ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ದಿನಾಂಕ ಏಪ್ರಿಲ್ 3 ರಂದು ಮಧುಗಿರಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ತಾಲ್ಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ರಾಜೇಂದ್ರ ರಾಜಣ್ಣ ಭಾಗವಹಿಸಿ ಎಲ್ಲಾ ಇಲಾಖೆಗಳಿಂದ ತಾಲ್ಲೂಕಿನಾದ್ಯಂತ ಪ್ರಗತಿಯಲ್ಲಿರುವ ಕಾಮಗಾರಿಗಳು ಹಾಗೂ ಶಂಕು ಸ್ಥಾಪನೆ ಮತ್ತು ಉದ್ಘಾಟನೆ ಹಾಗೂ ವಿವಿಧ ಅಭಿವೃದ್ಧಿ ಯೋಜನೆ ಕಾಮಗಾರಿಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು ಚರ್ಚಿಸಿ, ಮುನ್ನೆಚ್ಚರಿಕೆಯ ಎಲ್ಲಾ ರೀತಿಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿಯಾದ ಸಂಜೀವಪ್ಪನವರು, ಉಪವಿಭಾಗಾಧಿಕಾರಿಯಾದ ಗೊಟೂರು ಶಿವಪ್ಪನವರು, ತಹಸೀಲ್ದಾರ್ ಶ್ರೀನಿವಾಸ್ ಅವರು, ಇ.ಓ ಲಕ್ಷಣ್ , ಡಿ.ವೈ.ಎಸ್.ಪಿ ಮಂಜುನಾಥ್ ಅವರು, ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿಯಾದ ಸೋನಿಯಾ ವಾರ್ಣೇಕರ್ ತಾಪಂ ಯೋಜನಾ ನಿರ್ದೇಶಕ ಧನಂಜಯ , ಪುರಸಭೆ ಮಾಜಿ ಅಧ್ಯಕ್ಷರುಗಳಾದ ನಂಜುಂಡಯ್ಯನವರು, ಲಾಲಪೇಟೆ ಮಂಜುನಾಥ್ ಅವರು ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪೊಲೀಸರಿಗೆ ಲಿಂಗ ಸೂಕ್ಷ್ಮತೆಯ ಅರಿವಿರಬೇಕು : ಡಾ: ನಾಗಲಕ್ಷ್ಮೀ ಚೌಧರಿ ಕಿವಿಮಾತು

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು: ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆಗಳಲ್ಲಿ ಕೆಲಸ ಮಾಡುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಲಿಂಗ ಸೂಕ್ಷ್ಮತೆಯಿರಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ: ನಾಗಲಕ್ಷ್ಮೀ ಚೌಧರಿ ಕಿವಿಮಾತು ಹೇಳಿದ್ದಾರೆ.

ಜಿಲ್ಲೆಯ ಬಾಲಭವನದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಮಹಿಳೆಯರ ದೂರು ಹಾಗೂ ಅಹವಾಲುಗಳನ್ನು ಆಲಿಸಿದ ಬಳಿಕ ಸುದ್ದಿಗೋಷ್ಠಿ ನಡೆಸಿ ಅವರು, ದೌರ್ಜನ್ಯಕ್ಕೊಳಗಾದ ಮಹಿಳೆಯರು ಪೊಲೀಸ್ ಠಾಣೆಗಳಿಗೆ ಹೋದ ಸಂದರ್ಭದಲ್ಲಿ ಪೊಲೀಸ್ ಠಾಣೆಯ ಅಧಿಕಾರಿಗಳು ಮಹಿಳೆಯರಿಗೆ ಸೌಜನ್ಯದ ಮಾತುಗಳನ್ನಾಡದೆ ಅಗೌರವದಿಂದ ನಡೆಸಿಕೊಂಡ ಬಗ್ಗೆ ಸಭೆಯಲ್ಲಿ ಕೆಲವು ಪ್ರಕರಣಗಳನ್ನು ಗಮನಿಸಲಾಯಿತು. ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಅಥವಾ ಯಾವುದೇ ಸರ್ಕಾರಿ ಇಲಾಖೆ ವ್ಯವಹರಿಸುವಾಗ ಲಿಂಗ ಸೂಕ್ಷ್ಮತೆಯನ್ನು ಅರಿಯಬೇಕು ಎಂದು ಅವರು ಹೇಳಿದರು.

ಮಹಿಳೆಯರಿಗೆ ಸರಿಯಾದ ಸ್ಪಂದನೆ ಸಿಗಬೇಕೆಂಬ ಹಿನ್ನೆಲೆಯಲ್ಲಿ ಹಾಗೂ ಸಂಬಂಧಿಸಿದ ಅಧೀನ ಅಧಿಕಾರಿಗಳಿಗೆ ಹಾಗೂ ಪೊಲೀಸ್ ಸಿಬ್ಬಂದಿಗೆ ಸೂಚನೆ ನೀಡುವಂತೆ ತಿಳಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ ಎಂದರು.

ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯ ಅಥವಾ ಇನ್ನಿತರೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರಿಯಾದ ಸ್ಪಂದನೆ ಸಿಗದಿದ್ದರೆ ಇಲಾಖೆ ಬಗ್ಗೆ ಜನರಲ್ಲಿ ವಿಶ್ವಾಸ ಹೋಗುತ್ತದೆ. ಅಂತಹ ಕಳಂಕವನ್ನು ತರದಂತೆ ಅಧೀನ ಅಧಿಕಾರಿಗಳಿಗೆ ಸೂಚಿಸಬೇಕು ಎಂದರು.

ಇಂದಿನ ಅಹವಾಲು ಸ್ವೀಕಾರ ಸಭೆಯಲ್ಲಿ ಮಹಿಳೆಯರ ಸಾಕಷ್ಟು



ಸಮಸ್ಯೆಗಳಿಗೆ ಸ್ಪಂದನೆ ಸಿಕ್ಕಿದೆ ಎಂಬ ವಿಶ್ವಾಸ ನನಗಿದೆ. ಸಂಬಂಧಿಸಿದ ಇಲಾಖೆಗಳ ಎಲ್ಲಾ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, ಅಹವಾಲುಗಳಿಗೆ ಉತ್ತರ ನೀಡಿದ್ದಾರೆ ಹಾಗೂ ಸಮಸ್ಯೆಗೆ ಸ್ಪಂದನೆ ನೀಡಿದ್ದಾರೆ ಎಂದ ಅವರು, ಪ್ರತಿ ಬಾರಿ ಮಹಿಳಾ ಆಯೋಗವೇ ಸಮಸ್ಯೆಗಳನ್ನು ಬಗೆಹರಿಸಬೇಕೆಂಬ ಮನಸ್ಥಿತಿಯನ್ನು ಅಧಿಕಾರಿಗಳು ಬದಿಗಿರಿಸಿ ತಮ್ಮ ವ್ಯಾಪ್ತಿಯಲ್ಲಿ ಮಹಿಳೆಯರ ಕಲ್ಯಾಣಕ್ಕಾಗಿ ಹಾಗೂ ಅವರ ಸಮಸ್ಯೆಗೆ ಸ್ಪಂದನೆಯನ್ನು ನೀಡಬೇಕಿದೆ ಎಂದರು.

ತಿಂಗಳಿಗೊಮ್ಮೆಯಾದರೂ ಪಂಚಾಯ್ತಿ ಮಟ್ಟದಲ್ಲಿ ಮಹಿಳೆಯರ ಗ್ರಾಮ ಸಭೆ ನಡೆಸಿದಲ್ಲಿ ಮಹಿಳೆಯರ ಎಷ್ಟೋ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂದ ಅವರು, ಈ ಸಂಬಂಧ ಸರ

ಬೇಸಿಗೆ : ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಲಹೆ


ತುಮಕೂರು: ಭಾರತೀಯ ಹವಾಮಾನ ಇಲಾಖೆ ಹಾಗೂ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿಯಂತೆ ಬೇಸಿಗೆ ಕಾಲದ ತಾಪಮಾನದ ಅವಧಿಯಲ್ಲಿ ರಾಜ್ಯದ ಬಹುತೇಕ ಭಾಗಗಳಲ್ಲಿ ಗರಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುವ ಸಾಧ್ಯತೆಯಿದ್ದು, ಇದರಿಂದ ಹೀಟ್ ವೇವ್ ಸ್ಟೋಕ್(ಶಾಖದ ಅಲೆ)ನಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ.ಆದ್ದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಈ ಕೆಳಕಂಡ ಸಲಹೆಗಳನ್ನು ನೀಡಿದೆ.

ಸಾರ್ವಜನಿಕರು ಏನು ಮಾಡಬೇಕು : ಸಾರ್ವಜನಿಕರು ರೇಡಿಯೋ, ಟಿವಿ, ದಿನ ಪತ್ರಿಕೆಗಳಲ್ಲಿ ಬರುವ ಅತಿಯಾದ ಬಿಸಿಲಿನ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿಕೆಯಿಲ್ಲದಿದ್ದರೂ ಸಾಕಷ್ಟು ಮತ್ತು ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು. ಹಗುರವಾದ, ತಿಳಿ–ಬಣ್ಣದ ಸಡಿಲವಾದ ಮತ್ತು ರಂಧ್ರವುಳ್ಳ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೋಗುವಾದ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ/ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸಬೇಕು. ಬಸ್ಸಿನಲ್ಲಿ ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ. ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ, ಪ್ರಯಾಣ ಮಾಡುವಾಗ, ನಿಮ್ಮೊಂದಿಗೆ ನೀರನ್ನು ಒಯ್ದಿರಿ. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಿ. ಸಾಧ್ಯವಾದಷ್ಟು ಬಿಸಿ ಆಹಾರವನ್ನು ಸೇವಿಸಬೇಕು. ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಬೇಕು. ಆದಷ್ಟು ಫ್ಯಾನ್‌ಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗೆ, ತಣ್ಣೀರಿನಲ್ಲಿ ಸ್ನಾನ ಮಾಡಿ, ಕೆಲಸವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು.

ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ಹೆಚ್ಚಿನ ನೀರಿನ ಅಂಶವನ್ನು ಹೊಂದಿರುವ ಹಣ್ಣು ಮತ್ತು ತರಕಾರಿಗಳನ್ನು (ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ ಅನಾನಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ



ಬಳಲುತ್ತಿರುವವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿರುವವರು ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆವಹಿಸಬೇಕು. ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ, ತಕ್ಷಣ ವೈದ್ಯರನ್ನು ಭೇಟಿ ಮಾಡಬೇಕು.

ಮನೆಯನ್ನು ತಂಪಾಗಿರಿಸಲು ಪರದೆಗಳು, ಶೆಟರ್‌ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸಬೇಕು. ಹೊರಗೆ ಹೋಗುವಾಗ ನೀರಿನ ಬಾಟಲಿ, ಛತ್ರಿ, ಟೋಪಿ ಅಥವಾ ಕ್ಯಾಪ್/ಹೆಡ್ ಕವರ್, ಹ್ಯಾಂಡ್ ಟವೆಲ್, ಹ್ಯಾಂಡ್ ಫ್ಯಾನ್, ಎಲೆಕ್ಟ್ರೋಲೈಟ್/ಗ್ಲೂಕೋಸ್/ ಓಆರ್‌ಎಸ್ ಅನ್ನು ಒಳಗೊಂಡಿರುವ ಅತೀ ಹೆಚ್ಚು ತಾಪಮಾನವನ್ನು ತಡೆಗಟ್ಟುವ ಕಿಟ್‌ಅನ್ನು ಹೊಂದಿರಬೇಕು. ಅತೀ ಹೆಚ್ಚು ತಾಪಮಾನ



ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಆಗಿಂದಾಗ್ಗೆ ನೀಡುವ ಮಾರ್ಗಸೂಚಿಗಳನ್ನು ಪಾಲಿಸಬೇಕು.

ಸಾರ್ವಜನಿಕರು ಏನು ಮಾಡಬಾರದು :ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ಶಾಪಮಾನವು ಅವರಿಗೆ/ ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಿ, ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಬೇಕು. ಬಿಸಿಲಿನ ಸಮಯದಲ್ಲಿ ಅಡುಗೆ ಮಾಡಬಾರದು. ಅಡಿಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಯಿರಿ. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ತಂಪು ಪಾನೀಯಗಳನ್ನು ಸೇವಿಸಬೇಡಿ ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ.. ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು. ಚಪ್ಪಲಿ ಧರಿಸದೆ ಹೊರಹೋಗಬಾರದು.

ಆರೋಗ್ಯದ ಮೇಲಾಗುವ ಪರಿಣಾಮಗಳು : ಅತಿ ಹೆಚ್ಚು ತಾಪಮಾನದಿಂದಸಾಮಾನ್ಯವಾಗಿ ನಿರ್ಜಲೀಕರಣ, ಶಾಖ ಸೆಳೆತ, ಶಾಖದ ಬಳಲಿಕೆ ಅಥವಾ ಶಾಖದ ಅಘಾತದಂತಹ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇದ್ದು ಅವುಗಳ ರೋಗ ಲಕ್ಷಣಗಳು ಈ ಕೆಳಕಂಡಂತಿವೆ.

ಶಾಖ ಸೆಳೆತಗಳು ಸಾಮಾನ್ಯವಾಗಿ 39ಲಿಅ ಅಂದರೆ 102 "ಈ ಗಿಂತ ಕಡಿಮೆ ಜ್ವರದಿಂದ ಬಳಲುತ್ತಿರುವವರಲ್ಲಿ ಎಡಿಮಾ(ಊತ) ಮತ್ತು ಮೂರ್ಛೆಯಂತಹ ಲಕ್ಷಣಗಳು ಕಂಡು ಬರುತ್ತವೆ.

ಶಾಖದ ಬಳಲಿಕೆಯಿಂದ ಆಯಾಸ, ದೌರ್ಬಲ್ಯ, ತಲೆತಿರುಗುವಿಕೆ, ತಲೆನೋವು ವಾಕರಿಕೆ, ವಾಂತಿ, ಸ್ನಾಯು ಸೆಳೆತ ಮತ್ತು ಬೆವರು ಉಂಟಾಗುತ್ತದೆ. ಶಾಖಾಘಾತದಿಂದ ದೇಹದ ಉಷ್ಣತೆಯು 40 * ಅ ಅಂದರೆ 104 * ಈ ಅಥವಾ ಅದಕ್ಕಿಂತ ಹೆಚ್ಚಾಗುವುದು ಹಾಗೂ ಉಸಿರಾಟದಲ್ಲಿ ವ್ಯತ್ಯಯ ಮತ್ತು ಪ್ರಜ್ಞೆ ತಪ್ಪುವುದು.

ಅತೀ ಹೆಚ್ಚು ತಾಪಮಾನಕ್ಕೆ ಸಂಬಂಧಿತ ಕಾಯಿಲೆಗೆ ಪ್ರಥಮ ಚಿಕಿತ್ಸೆ: ಅತೀ ಹೆಚ್ಚು ತಾಪಮಾನಕ್ಕೆ ತುತ್ತಾದ ವ್ಯಕ್ತಿಯನ್ನು ನೆರಳಿನ ಅಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು. ಒದ್ದೆಯಾದ ಬಟ್ಟೆಯಿಂದ ಮೈಒರೆಸಬೇಕು ಹಾಗೂ ದೇಹದ ಉಷ್ಣತೆಯನ್ನು ತಗ್ಗಿಸಲು ತಲೆಯ ಮೇಲೆ ನೀರನ್ನು ಹಾಕಬೇಕು. ನೀರು ಅಥವಾ ಪುನರ್ಜಲೀಕರಣ ಪಾನೀಯಗಳಾದ ಓಆರ್‌ಎಸ್, ನಿಂಬೆಪಾನಕ ನೀಡಬೇಕು(ವ್ಯಕ್ತಿ ಇನ್ನೂ ಪ್ರಜ್ಞೆಹೊಂದಿದ್ದರೆ). ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ ಮಾಡಬೇಕು. ರೋಗ ಲಕ್ಷಣಗಳು ಉಲ್ಬಣಗೊಂಡರೆ ಅಥವಾ



ದೀರ್ಘಕಾಲದವರೆಗೆ ಇದ್ದರೆ ಅಥವಾ ವ್ಯಕ್ತಿಯು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರೆ ವೈದ್ಯರನ್ನು ಸಂಪರ್ಕಿಸಬೇಕು. ಮದ್ಯಪಾನ, ಕಾಫಿ, ಶೇಖರಿಸಿದ ಪಾನೀಯವನ್ನು ನೀಡಬಾರದು. ಅತೀ ಹೆಚ್ಚು ತಾಪಮಾನದಿಂದ) ಬಳಲಿಕೆಗೆ ತುತ್ತಾದವರ ಮೇಲೆ ತಂಪಾದ ಒದ್ದೆ ಬಟ್ಟೆಯನ್ನು ಹಾಕುವ ಮೂಲಕ ವ್ಯಕ್ತಿಯನ್ನು ತಂಪಾಗಿಸಬೇಕು. ಉತ್ತಮ ಗಾಳಿಗಾಗಿ ಬಟ್ಟೆಗಳನ್ನು ಸಡಿಲಗೊಳಿಸಬೇಕು. ಅತೀ ಹೆಚ್ಚು ತಾಪಮಾನದಿಂದ ಉದ್ಭವಿಸಬಹುದಾದ ರೋಗಲಕ್ಷಣಗಳನ್ನು, ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಆಗಿಂದಾಗ್ಗೆ ನೀಡುವ ಮಾರ್ಗಸೂಚಿಗಳನ್ನು ಪಾಲಿಸಬೇಕೆಂದು ಜಿಲ್ಲಾ ವಿಪತ್ತು

ಬ್ಯಾಸಗೀ ದಿವಸಕ್ಕೆ ಬೇವಿನ ಮರ ತಂಪು..... ಭೀಮಾರತಿಯೆಂಬ ಹೊಳೆ ತಂಪು.....

ಇದು ಒಂದು ಜಾನಪದ ಗೀತೆಯ ಸಾಲು. ಮದುವೆಯಾಗಿ ಗಂಡನ ಮನೆಗೆ ಬಂದ ಹೆಣ್ಣೊಬ್ಬಳು ತನ್ನ ತವರನ್ನೂ, ಅಲ್ಲಿರುವ ತನ್ನ ತಾಯಿಯನ್ನು ನೆನೆದು ಹಾಡುತ್ತಾಳೆ. ಬೇಸಿಗೆ ದಿನಗಳಲ್ಲಿ ಬೇವಿನ ಮರದ ದಟ್ಟವಾದ ನೆರಳು ಬಿಸಿಲಿನಿಂದ ಕಂಗೆಟ್ಟ ಚಿಕ್ಕ ಪುಟ್ಟ ಹಕ್ಕಿಗಳಿಗೆ, ಉಸಿರಿಗಳಿಗೆ ತಂಪು ಕೊಟ್ಟು ಕಾಪಾಡುತ್ತದೆ. ತನ್ನ ತವರಿನಲ್ಲಿನ ತಾಯಿ ಕೂಡ ಹಾಗೆಯೇ ನನಗೆ ನೆರಳು ಕೊಡುತ್ತಾಳೆ ಅಂತ ಹಾಡಿದ್ದಾಳೆ.

ಬೇಸಿಗೆಯ ದಿನಗಳಲ್ಲಿ ಮೈಯೊಳಿತನ್ನು ಕಾಪಾಡುವದು ತುಂಬಾ ಮುಕ್ಯ. ಬೇಸಿಗೆಯಲ್ಲಿ ಬಿಸಿಲು ಹೆಚ್ಚಾಗಿ ನಮ್ಮ ಮೈಯ ತೊಗಲಿನಲ್ಲಿರುವ ಕಣ್ಣಿಗೆ ಕಾಣದ ತೂತುಗಳಿಂದ ನೀರನ್ನು ಆವಿಯಾಗಿಸುತ್ತಾ ತಂಪು ಮಾಡುತ್ತಾ ಇರುತ್ತದೆ. ಆಗ ನಮ್ಮ ಮೈಯಲ್ಲಿ ನೀರಿನಂಶ ಕಡಿಮೆಯಾಗುತ್ತದೆ. ಇದನ್ನು ಸರಿದೂಗಿಸಲು ನಾವು ನೀರನ್ನು ಮತ್ತು ನೀರಿನಂಶ ಹೆಚ್ಚಿರುವ ಹಣ್ಣು ಮತ್ತು ರಸಗಳನ್ನು ತೆಗೆದುಕೊಳ್ಳಬೇಕು. ಈ ಕುಡಿಗೆಗಳಲ್ಲಿನಸಕ್ಕರೆ ಅಂಶ ನಮಗೆ ಕ್ಯಾಲೋರಿಗಳನ್ನು ಒದಗಿಸುತ್ತದೆ. ನೀರಿನಂಶ ಹೆಚ್ಚಿರುವ ಮತ್ತು ಬೇಸಿಗೆಗೆ ಹೇಳಿ ಮಾಡಿಸಿರುವ ಹಣ್ಣು ಮತ್ತು ಕುಡಿಗೆಗಳ ಬಗ್ಗೆ ತಿಳಿಯೋಣ.

ಕಬ್ಬಿನ ಹಾಲು

ಕಬ್ಬಿನ ಹೊಲಗಳಿಂದ ಕತ್ತರಿಸಿಕೊಂಡು ಬಂದ ಕಬ್ಬನ್ನು ಗಾಣಗಳಲ್ಲಿ ಹಿಂಡಿ ತೆಗೆಯುವ ಕಬ್ಬಿನ ಹಾಲು ಬೇಸಿಗೆಯಲ್ಲಿ ಮೈಸೆಕೆ ಓಡಿಸಲು ತುಂಬಾ ನೆರವಿಗೆ ಬರುತ್ತದೆ. ಪ್ಯಾಕ್ಟರಿಗಳಲ್ಲಿ ತಯಾರಾದ ಕ್ರುತಕ ತಂಪು ಕುಡಿತಗಳ ಬದಲಿಗೆ ಕಬ್ಬಿನಹಾಲು ಕುಡಿಯಬೇಕು. ನಿಂಬೆಹಣ್ಣು, ಶುಂಟಿ ಮಂಜುಗಡ್ಡೆ ಸೇರಿಸಿದ ಕಬ್ಬಿನಹಾಲು ಕುಡಿಯುವಾಗ ಬೇಸಿಗೆಯನ್ನು ಮರೆತು ಹೋಗುವಿರಿ. ಕಬ್ಬಿನಹಾಲು ಹಿಂಡಿದ ಮೇಲೆ ಒಂದು ಗಂಟೆಯೊಳಗೆ ಅದನ್ನು ಕುಡಿಯಬೇಕು. ಒಂದು ಗಂಟೆ ಆದ ಮೇಲೆ ಅದರಲ್ಲಿ ಹುಳಿ ಬರುತ್ತದೆ. ಊಟ ಮಾಡುವದಕ್ಕಿಂತ ಒಂದು ಗಂಟೆ ಮೊದಲು ಕಬ್ಬಿನಹಾಲು ಕುಡಿಯಬೇಕು. ಊಟವಾದ ಮೇಲೆ ಇದನ್ನು ಕುಡಿಯಬಾರದು. ಆಲೆಮನೆಯಲ್ಲಿ ಬೆಲ್ಲ ತಯಾರು ಆಗುವಾಗ ಹಾಲು ಆವಿಯಾಗುತ್ತಾ ಕಂದು ಬಣ್ಣದ ತಿಳಿಯಾದ ಪಾಕ ಆಗುತ್ತದೆ ಇದನ್ನು 'ಚೀಕು' ಎನ್ನುತ್ತಾರೆ. ಇದು ಬೆಲ್ಲವಲ್ಲ ಆದರೆ ಬೆಲ್ಲವಾಗುವ ಮೊದಲ ಹಂತ. ಈ ಚೀಕನ್ನು ಇನ್ನಷ್ಟು ಕುದಿಸಿ ತಣಿಸಿದಾಗ ಅದು ಬೆಲ್ಲವಾಗುತ್ತದೆ. ಕಬ್ಬಿನ ಹಾಲು ಸಿಗದಿದ್ದಾಗ, ಒಂದು ಗ್ಲಾಸು ನೀರಿಗೆ ಬೆಲ್ಲ, ನಿಂಬೆಹಣ್ಣು ರಸ ಸ್ವಲ್ಪ ಸೇರಿಸಿ ಬೆಲ್ಲದ ರಸ್ನಾ ಮಾಡಿಕೊಂಡು ಕುಡಿಯಬಹುದು. ಬೆಲ್ಲದಲ್ಲಿ ನಮಗೆ ಬೇಕಾದ ಕಬ್ಬಿಣಾಂಶ ಇದೆ. ಕಬ್ಬಿನಹಾಲು ಕಾಮಾಲೆ ರೋಗಕ್ಕೆ ಮದ್ದು ಎನ್ನುತ್ತಾರೆ. ಕಬ್ಬಿನ ಹಾಲಿನ ಹುಗ್ಗಿಯೂ ರುಚಿಕಟ್ಟಾಗಿ ಗಮ ಗಮವಾಗಿ ಇರುತ್ತದೆ. ಕಬ್ಬಿನ ಹಾಲಿನಲ್ಲಿ ಸಕ್ಕರೆ ಅಂಶ ಮತ್ತು ಕ್ಯಾಲೋರಿ ಹೇರಳವಾಗಿ ಇರುವದರಿಂದ ಡಯಾಬಿಟಿಸ್ ಇರುವವರು ಎಚ್ಚರಿಕೆಯಿಂದ ಬಳಸುವದು ಒಳ್ಳೇದು.

ಮಜ್ಜಿಗೆ

ಮಜ್ಜಿಗೆಯು ಮಳೆ–ಚಳಿ–ಬೇಸಿಗೆ ಎನ್ನದೆ ತೆಂಕಣ ಇಂಡಿಯಾದ ಊಟದಲ್ಲಿ ಸೇರಿಕೊಂಡು ಬಿಟ್ಟಿದೆ. ಬೇಸಿಗೆಯಲ್ಲಿ ಇದು ಇನ್ನಷ್ಟು ಒಲವುಳ್ಳದ್ದಾಗುತ್ತದೆ. ಬಿಸಿಲೆಂದು ಮನೆಯೊಳಗೆ ಬಂದಾಗ ಒಂದು ಗ್ಲಾಸು ಮಜ್ಜಿಗೆ ಸಿಕ್ಕಿತೆಂದರೆ ಆಯಾಸ ಕಡಿಮೆ ಆಗುತ್ತದೆ. ಸ್ವಲ್ಪ ಹುಳಿ ಇರುವ ಮಜ್ಜಿಗೆಗೆ ಹೆಚ್ಚಿದ ಕೊತ್ತಂಬರಿ ತಪ್ಪಲು, ಉಪ್ಪು, ಶುಂಟಿ–ಬೆಳ್ಳುಳ್ಳಿ ಪೇಸ್ಟ್ ಹಾಕಿದರೆ ರುಚಿಕಟ್ಟಾದ ಬೇಸಿಗೆ ಕುಡಿಗೆ ತಯಾರು ಆಗುತ್ತದೆ. ಇದನ್ನು ಕುಡಿದ ಮೇಲೆ ಮತ್ತೇನೂ ಕುಡಿಯಬೇಕಾಗಿಲ್ಲ! ಹಳ್ಳಿಯ ಕಡೆ ಕೆಲವರು ಮೂರು ದಿನ ಹುಳಿಯಾದ ಮಜ್ಜಿಗೆಗೆ ಉಪ್ಪು ಹಾಕದೆ ಕುಡಿಯುತ್ತಾರೆ. ಮಜ್ಜಿಗೆ ಆಯಸ್ಸು ಹೆಚ್ಚು ಮಾಡುತ್ತದೆ ಎನ್ನೋ ಕ್ಯಾತಿ ಗಳಿಸಿದೆ. ಬೇಸಿಗೆ ನಮ್ಮನ್ನು ಉರಿಸ ಬಂದರೆ ಮಜ್ಜಿಗೆ ನಮ್ಮನ್ನು ತಣಿಸ ಬರುತ್ತಾನೆ! ಮಜ್ಜಿಗೆ ಬಗ್ಗೆ ಹೇಳುತ್ತಾ ಹೋದರೆ ಒಂದು ದಿನ ಸಾಕಾಗದು. ಮಜ್ಜಿಗೆಗೆ ಕರಿಬೇವು, ಸಾಸಿವೆ, ಜೀರಿಗೆ ಒಗ್ಗರಣೆ ಕೊಟ್ಟಾಗ ಮಜ್ಜಿಗೆ ಹುಳಿ ಆಗುತ್ತದೆ. ಇದೇ ಮಜ್ಜಿಗೆಗೆ ಹಿಟ್ಟು ಹಾಕಿ ಕುದಿಸಿದಾಗ ಡಯಟ್ ಮಾಡುವವರ ಅಂಬಲಿ ಆಗುತ್ತದೆ. ಬೆಣ್ಣೆ ತೆಗೆಯದೇ ಸಕ್ಕರೆ ಸೇರಿಸಿದರೆ ಲಸ್ಸೀ ಆಗುತ್ತದೆ. 100 ಗ್ರಾಂ ಮಜ್ಜಿಗೆಯಲ್ಲಿ 40 ಕ್ಯಾಲೋರಿ ಶಕ್ತಿ ಇದೆ. ತೆಂಕಣ ಇಂಡಿಯಾದ ಊಟದ ಕೊನೆಗೆ ಮಜ್ಜಿಗೆ ಇದ್ದೇ ಇರುತ್ತದೆ. ಊಟವಾದ ಮೇಲೆ ಮಜ್ಜಿಗೆ ಕುಡಿಯದಿದ್ದರೆ ಕೆಲವರಿಗೆ ಏನೋ ಕಳೆದುಕೊಂಡ ಅನುಬವ ಆಗುತ್ತದೆ!

ನಿಂಬೆ ಹಣ್ಣು

ಚಿಕ್ಕವರಿದ್ದಾಗ ಬೇಸಿಗೆ ರಜದಲ್ಲಿ ಕ್ರಿಕೆಟ್ ಗ್ರೌಂಡಿನಿಂದ ಆಡಿ ಮನೆಗೆ ಬಂದಾಗ ನಿಂಬೆ ಹಣ್ಣಿನ ರಸ್ನಾ ಸಿಗುತ್ತಿತ್ತು. ಇದನ್ನು ಕುಡಿದ ಮೇಲೆ ಮೈ ಆಯಾಸವೆಲ್ಲಾ ಕಳೆದು ಬಿಡುತ್ತಿತ್ತು. ಚಿಕ್ಕಂದಿನ ಬೇಸಿಗೆ ರಜದ ಸಿಹಿ ನೆನಪುಗಳಲ್ಲಿ ಈ ನಿಂಬೆಹಣ್ಣಿನ ರಸ್ನಾ ಕೂಡ ಒಂದು. ಮಾಡುವುದು ತುಂಬಾ ಸುಲಬ. ನೀರಿಗೆ ನಿಂಬೆ ಹಣ್ಣಿನ ರಸ, ಸಕ್ಕರೆ ಮತ್ತು ಮಂಜುಗಡ್ಡೆ ಸೇರಿಸಿದರೆ ಆಯ್ತು. ತಾಜಾತನಕ್ಕೆ ಮತ್ತೊಂದು ಹೆಸರು ನಿಂಬೆಹಣ್ಣು. ಸಿಹಿ ಅಡುಗೆಗಳನ್ನು ಬಿಟ್ಟರೆ ಇದು ಎಲ್ಲಾ ತರಹದ ಊಟಗಳಲ್ಲಿ



ಕೊಡುವ ಹಣ್ಣುಗಳಲ್ಲಿ ನಿಂಬೆಗೆ ಮೊದಲ ಜಾಗ. ನಿಂಬೆ ಹಣ್ಣಿನಲ್ಲಿ ವಿಟಮಿನ್ ಸಿ ಹೇರಳವಾಗಿದೆ. ಮೈತೊಗಲಿನ ಆರೋಗ್ಯಕ್ಕೆ ವಿಟಮಿನ್ ಸಿ ಬೇಕು. ನಮ್ಮಲ್ಲಿ ನಿಂಬೆ ಹಣ್ಣಿನ ರಸ್ನಾ ಮಾಡಿದರೆ ಅಮೆರಿಕದಲ್ಲಿ ಲೆಮನೇಡ್ ಅಂತ ಮಾಡುತ್ತಾರೆ. ಆನೆನಿಂಬೆಗೆ ಲೆಮನ್ ಅಂತ ಮತ್ತು ನಿಂಬೆಹಣ್ಣಿಗೆ ಲೈಮ್ ಅಂತ ಕರೆಯುತ್ತಾರೆ. ಇಟಲಿಯಲ್ಲಿ ದಪ್ಪ ಸಿಪ್ಪೆಯ ಲೆಮನ್ ಅನ್ನು ಬಳಸಿ ಲೆಮನಚೆಲ್ಲೋ ಅನ್ನೋ ಸಿಹಿ ಡ್ರಿಂಕ್ ಮಾಡುತ್ತಾರೆ. ನಿಂಬೆಯ ಪ್ರೆಶ್ ಗಮವು ಮನಸ್ಸನ್ನು ಅರಳಿಸಿ ತಾಜಾತನದ ಅನುಬವ ಕೊಟ್ಟು ಆಯಾಸವನ್ನು ನೀಗಿಸುತ್ತದೆ. ಮುಂಜಾನೆ ಒಂದು ಗ್ಲಾಸು ನೀರಿಗೆ ಅರ್ಧ ನಿಂಬೆಹಣ್ಣು ಹಾಕಿ ಕುಡಿದರೆ ತೂಕ ಕಡಿಮೆಯಾಗುತ್ತದೆ ಅನ್ನುತ್ತಾರೆ. ನಿಂಬೆಯಲ್ಲಿ ಅಂಟಾಸಿಡ್ ಗುಣವಿದೆ.

ಸೌತೆಕಾಯಿ

ಅಂಗೈಯಲ್ಲಿ ಹರಳುಪ್ಪು ಹಾಕಿಕೊಂಡು, ಅದರಲ್ಲಿ ಸೌತೆಕಾಯಿ ಅದ್ದುತ್ತಾ ಕರಕರನೇ ಆಡುಗಳ ಹಾಗೆ ಎಳೆ ಸೌತೆಕಾಯಿ ತಿನ್ನುತ್ತಿದ್ದ ಚಿಕ್ಕಂದಿನ ನೆನಪು ನನ್ನಲ್ಲಿ ಈಗಲೂ ನಗೆ ಉಕ್ಕಿಸುತ್ತದೆ. ಸೌತೆಕಾಯಿ ಜಗತ್ತಿನ ತುಂಬಾ ಹಳೆಯ ಬಳ್ಳಿ ತರಕಾರಿಗಳಲ್ಲಿ ಒಂದು. ಮೆಸೊಪೊಟೆಮಿಯಾದ ಹಳೆಯ ಪಟ್ಟಣವಾದ ಊರ್ ಎಂಬಲ್ಲಿ ಇದನ್ನು ಬೆಳೆಯುತ್ತಿದ್ದರು ಎಂದು ಅರಕೆಗಾರರು ಕಂಡು ಹಿಡಿದಿದ್ದಾರೆ. ಕನ್ನಡನಾಡಿನಲ್ಲಿ ಕೆಲವು ಕಡೆ ಇದನ್ನು ಮುಳ್ಳು ಸೌತೆಕಾಯಿ ಎಂದೂ ಕರೆಯುತ್ತಾರೆ. ಸೌತೆಕಾಯಿಯಲ್ಲಿ ನೀರಿನಂಶ ಹೇರಳವಾಗಿದೆ. ಬಂಡಿಯ ಮೇಲೆ ಮಾರುವವ

ಗ್ರಾಮ ಪಂಚಾಯ್ತಿ ಮುಂಭಾಗ ನೀರಿನ ಕೊಡ ಹಿಡಿದು ಮಹಿಳೆಯರ ಪ್ರತಿಭಟನೆ!



ಕುಣಿಗಲ್ ತಾಲ್ಲೂಕಿನ ಹುಲಿಯೂರುದುರ್ಗ ವ್ಯಾಪ್ತಿಯ ಉಜ್ಜನಿ ಗ್ರಾಮದಲ್ಲಿ ಕಳೆದ ಒಂದು ತಿಂಗಳಿನಿಂದ ಸರಿಯಾಗಿ ಕುಡಿಯುವ ನೀರು ಬಿಡದ ಕಾರಣ ಗ್ರಾಮದ ಮಹಿಳೆಯರು ಖಾಲಿ ಬಿಂದಿಗೆ ಹಿಡಿದು ಗುರುವಾರ ಗ್ರಾಮ ಪಂಚಾಯಿತಿ ಮುಂಭಾಗ ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ, ಕಳೆದ ಒಂದು ವರ್ಷಗಳ ಹಿಂದೆ ಗ್ರಾಮದಲ್ಲಿ ಜೆ.ಜೆ. ಎಂ ಯೋಜನೆಯಡಿ ಕಾಮಗಾರಿಯ ಪ್ರಾರಂಭಿಸಿ ಒಂದು ವರ್ಷ ಕಳೆದರು ಸಹ ಸರಿಯಾಗಿ ಕಾಮಗಾರಿ ಪೂರ್ಣಗೋಳಿಸದೆ ಗ್ರಾಮದಲ್ಲಿ ಹಲವು ಮನೆಗಳಿಗೆ ಸರಿಯಾಗಿ ನೀರಿಲ್ಲದಂತಾಗಿದೆ,ಗ್ರಾಮ ಪಂಚಾಯ್ತಿಯಿಂದ ಈ ಹಿಂದೆ ಗ್ರಾಮದಲ್ಲಿ ಕುಡಿಯುವ ನೀರಿಗೆ ಸಂಪರ್ಕ ಮಾಡಿದ್ದ ಪೈಪ್ ಲೈನ್ ಗಳನ್ನು ಇತ್ತೀಚೆಗೆ ಜೆ.ಜೆ. ಎಂ ಕಾಮಗಾರಿ ಮಾಡುವ ಸಂದರ್ಭದಲ್ಲಿ ಒಡೆದುಹಾಕಲಾಗಿದೆ ಇದರಿಂದ ಗ್ರಾಮದಲ್ಲಿರುವ ನೀರಿನ ಟ್ಯಾಂಕ್ ಗಳಿಗೆ ನೀರು ಸರಬರಾಜಗದೆ ಇರುವ ಕಾರಣ ಗ್ರಾಮದಲ್ಲಿ ನೀರಿನ ಸಮಸ್ಯೆ ಉಲ್ಬಣವಾಗಿದೆ ಈ ಬಗ್ಗೆ ಕಳೆದೊಂದು ತಿಂಗಳಿನಿಂದ ಗ್ರಾಮ ಪಂಚಾಯಿತಿ.ತಾಲ್ಲೂಕು ಪಂಚಾಯ್ತಿ ಹಾಗೂ ಗ್ರಾಮೀಣಾ ಕುಡಿಯುವ ನೀರಿನ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು ಸಮಸ್ಯೆ ಬಗೆಹರಿಸಿಲ್ಲ ಎಂದು ಗ್ರಾಮದ ಮಹಿಳೆಯರು ಅಧಿಕಾರಿಗಳ ನಡೆಗೆ ಆಕ್ರೋಶ ವ್ಯಕ್ತಪಡಿಸಿದರು ಗ್ರಾಮದಲ್ಲಿ ಚೌಡೇಶ್ವರಿ ಹಬ್ಬಕ್ಕೆ ಹದಿನೈದು ದಿನಗಳು ಬಾಕಿ ಉಳಿದಿದ್ದು ಗ್ರಾಮದಲ್ಲಿ ಕುಡಿಯುವ ನೀರು ಇಲ್ಲದಂತಾಗಿದೆ,ನೀರಿಗಾಗಿ ಗ್ರಾಮದ ಸುತ್ತಮುತ್ತಲ ರೈತರ ಕೋಳವೆಬಾವಿಗಳನ್ನು ಆಶ್ರಹಿಸುವಂತಾಗಿದೆ ಸ್ಥಳಕ್ಕೆ ಅಧಿಕಾರಿಗಳು ಸಮಸ್ಯೆ ಬಗೆಹರಿಸುವ ವರೆಗೂ ಸ್ಥಳದಿಂದ ತೆರಳುವುದಿಲ್ಲ ಎಂದರು.ಈ ವೇಳೆ ಸ್ಥಳಕ್ಕೆ ಗ್ರಾಮೀಣಾ ಕುಡಿಯುವ ನೀರಿನ ಸಹಾಯಕ ಇಂಜಿನಿಯರ್ ಸಾಬಣ್ಣ ಬಂದ ಕೂಡಲೆ ತರಾಟೆಗೆ ತೆಗೆದುಕೊಂಡ ಮಹಿಳೆಯರು ನಮಗೆ ನೀರು ಕೊಟ್ಟು ನಂತರ ಇಲ್ಲಿಂದ ತೆರಳುವಂತೆ ತಾಕೀತು ಮಾಡಿದ ಪ್ರಸಂಗ ಜರುಗಿತು, ಕೊಟ್ಯಂತರ ರೂಪಾಯಿ ವೇಚ್ಚದಲ್ಲಿ ಜೆ.ಜೆ.ಎಂ ಕಾಮಗಾರಿ ಪ್ರಾರಂಭ ಮಾಡಲಾಗಿದೆ ಕಾಮಗಾರಿ ಕಳಪೆಯಿಂದ ಕೂಡಿದೆ ಹಳೆಯ ನೀರಿನ ಟ್ಯಾಂಕ್ ಗೆ ಬಣ್ಣ ಬಳಿದು ಗ್ರಾಮ ಪಂಚಾಯಿತಿಗೆ ಸೆರಿದ ಕೊಳವೆ ಬಾವಿಗಳಿಂದ ನೀರು ಪೂರೈಸಲಾಗುತ್ತಿದೆ ಸರಿಯಾಗಿ ಪೈಪ್ ಲೈನ್ ಕಾಮಗಾರಿ ಮಾಡಿಲ್ಲ ಎಂದು ತಾರಾಟೆಗೆ ತೆಗೆದುಕೊಂಡರು ಬಳಿಕ ಸ್ಥಳಕ್ಕೆ ಆಗಮಿಸಿದ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣ ಅಧಿಕಾರಿಯ ವಸಂತ್ ಕುಮಾರ್ ಸ್ಥಳಕ್ಕೆ ಆಗಮಿಸಿ ಇನ್ನೆರಡು ದಿನಗಳಲ್ಲಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದ ಬಳಿಕ ಮಹಿಳೆಯರು ಪ್ರತಿಭಟನೆ ಕೈಬಿಟ್ಟರು ಬಳಿಕ ಗ್ರಾಮದಲ್ಲಿ ನೀರಿನ ಸಮಸ್ಯೆ ಇರುವ ಸ್ಥಳಗಳಿಗೆ ಬೇಟಿ ನೀಡಿದ ಕಾರ್ಯನಿರ್ವಹಣ ಅಧಿಕಾರಿಗಳು ಕಾಮಗಾರಿ ಶೀಘ್ರವಾಗಿ ಪೂರ್ಣಗೊಳಿಸುವಂತೆಸೂಚಿಸಿದರುಈವೇಳೆ ಸಾವಿತ್ರಮ್ಮ,ಜಯಶೀಲಾ,ಪುಟ್ಟರಂಗಮ್ಮ, ಮಂಜುಳಿ,ಶಾಂತಮ್ಮ,ಪ್ರೇಮ,ಲಕ್ಷ್ಮಮ್ಮ ಸೇರಿದಂತೆ ಗ್ರಾಮದ ಹಲವರು ಉಪಸ್ಥಿತರಿದ್ದರು

ನಗರಸಭೆಯಿಂದ ವಿಶೇಷ ಚೇತನ ಮಕ್ಕಳಿಗೆ ಬಾಂಡ್ ವಿತರಣೆ



ಸೂರ್ಯಪ್ರಗತಿ ನ್ಯೂಸ್.ಕಾಂ

ರಾಮನಗರ: ವಿಶೇಷ ಚೇತನ ಮಕ್ಕಳಿಗೆ ರಾಮನಗರ ನಗರಸಭೆ ವತಿಯಿಂದ 40 ಸಾವಿರ ಮೊತ್ತದಂತೆ ಇಂಡಿಯನ್ ಪೋಸ್ಟ್ ಆಫೀಸ್ ಬಾಂಡ್‌ಗಳನ್ನು ವಿತರಿಸಲಾಯಿತು.

ನಗರಸಭೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಶಶಿ ಅವರು, 16 ಮಕ್ಕಳಿಗೆ ಬಾಂಡ್‌ಗಳನ್ನು ವಿತರಿಸಿದರು. ಈ ಬಾಂಡ್‌ಗಳು 2035 ಸೆಪ್ಟೆಂಬರ್ ತಿಂಗಳವರೆಗೆ 10 ವರ್ಷಗಳ ಕಾಲ ಚಾಲ್ತಿಯಲ್ಲಿರುತ್ತದೆ. ಅಂದು ಈ ಮೊತ್ತ ರೂ.81200 ಆಗಿರಲಿದೆ. ಫಲಾನುಭವಿಗಳಿಗೆ ಪಾಸ್‌ಬುಕ್ ಮತ್ತು ಬಾಂಡ್‌ಗಳನ್ನು ವಿತರಿಸಿ ಮಾತನಾಡಿದ, ಅಧ್ಯಕ್ಷ ಕೆ.ಶೇಷಾದ್ರಿ ಶಶಿ ಅವರು, ವಿಶೇಷ ಚೇತನ ಮಕ್ಕಳು ದೇವರಿಗೆ ಸಮ ಎಂದು ಭಾವಿಸುತ್ತೇವೆ. ಈ ಮಕ್ಕಳ ಆರೋಗ್ಯ, ಶಿಕ್ಷಣ, ಪೋಷಣೆ ಸೇರಿದಂತೆ ಎಲ್ಲ ರೀತಿಯಲ್ಲಿ ನೆರವಿಗೆ ನಿಲ್ಲುವುದು ಒಂದು ಪುಣ್ಯದ ಕೆಲಸ. ಹಾಗೂ ಇಡೀ ಸಮಾಜದ ಕರ್ತವ್ಯ ಎಂದರು.

ಈ ಮಕ್ಕಳನ್ನು ಪೋಷಿಸುವುದು ಅತ್ಯಂತ ಕ್ಲಿಷ್ಟಕರ. ಸಾಮಾನ್ಯ 10 ಮಕ್ಕಳನ್ನು ಸಾಕಬಹುದು. ಆದರೆ ಒಂದು ವಿಶೇಷ ಚೇತನ ಮಕ್ಕಳನ್ನು ಸಾಕಲು ಸಾಕಷ್ಟು ಮಾನಸಿಕ ಸ್ಥೈರ್ಯ ಬೇಕು. ಆದರೂ ಇವರ ಪೋಷಣೆಯ ಜವಾಬ್ದಾರಿಯನ್ನು ಹೊತ್ತ ತಂದೆ, ತಾಯಿ ಹಾಗೂ ಪೋಷಕರ ಶ್ರಮ ಶ್ಲಾಘನೀಯ. ಮಕ್ಕಳನ್ನು ನಿಭಾಯಿಸುವಲ್ಲಿ ವಿಶೇಷವಾಗಿ ತಾಯಂದಿರ ಪರಿಶ್ರಮ ಮತ್ತು ಅವರ ಸೇವೆಗೆ ಬೆಲೆ ಕಟ್ಟಲಾಗದು. ಅಂತರಿಗೆ ನೆರವಾಗಲೆಂದು ನಗರಸಭೆ ಬಾಂಡ್‌ಗಳನ್ನು ವಿತರಿಸುತ್ತಿದೆ ಎಂದರು.

2025–26ನೇ ಬಜೆಟ್‌ನಲ್ಲಿ ವಿಶೇಷ ಚೇತನ ಮಕ್ಕಳ ಅಭ್ಯುದಯಕ್ಕಾಗಿ 6.5 ಲಕ್ಷ ಅನುದಾನವನ್ನು ಮೀಸಲಿಟ್ಟಿದ್ದೇವು. 16 ಮಂದಿ ಪೋಷಕರು ಅರ್ಜಿ ಸಲ್ಲಿಸಿದ್ದರು. ಇವರಿಗೆ ರೂ.40600 ಮೊತ್ತದ ಇಂಡಿಯನ್ ಪೋಸ್ಟ್ ಆಫೀಸ್ ಬಾಂಡ್‌ಗಳನ್ನು ನೀಡುತ್ತಿದ್ದೇವೆ. ಇದು 10 ವರ್ಷದ ನಂತರ 81200ಕ್ಕೆ ಏರಿಕೆಯಾಗಲಿದೆ. ಮಕ್ಕಳ ಭವಿಷ್ಯ ಉಜ್ವಲವಾಗಿರಲಿ. ನಗರಸಭೆಯಿಂದ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸೌಲಭ್ಯಗಳನ್ನು ಒದಗಿಸಲು ಬದ್ಧವಾಗಿದ್ದೇವೆ ಮಕ್ಕಳನ್ನು ಉತ್ತಮವಾಗಿ ಪೋಷಿಸಲು ಪೋಷಕರಿಗೆ ದೇವರು ಹೆಚ್ಚಿನ ಶಕ್ತಿ, ಆಯಸ್ಸು, ಆರೋಗ್ಯ ಕೊಡಲಿ ಎಂದು ಆಶಿಸಿದರು.

ಈ ವೇಳೆ ಪೌರಾಯುಕ್ತರಾದ ಡಾ.ಜಯಣ್ಣ, ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಸದಸ್ಯರಾದ ಮುತ್ತುರಾಜು, ವಿಷಯ ನಿರ್ವಾಹಕರಾದ ಪುಟ್ಟಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಚನ ಕಲ್ಯಾಣ ಅಹೋರಾತ್ರಿ 9 ಗಂಟೆಗಳ ನಾಟಕ : ಕಲಾವಿದರ ಆಯ್ಕೆಗೆ ಅರ್ಜಿ ಆಹ್ವಾನ

ತುಮಕೂರು: ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 'ವಚನ ಕಲ್ಯಾಣ' ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಇಲಾಖೆ ಉದ್ದೇಶಿಸಿದ್ದು, ಈ ಸಂಬಂಧ ನುರಿತ ಹಾಗೂ ಆಸಕ್ತ ಯುವಕ/ ಯುವತಿಯರು ಹಾಗೂ ಅನುಭವಿ ರಂಗ ಕಲಾವಿದರು/ ಗಾಯಕರುಗಳಿಂದ ಅರ್ಜಿ ಅಹ್ವಾನಿಸಿದೆ.

ಆಸಕ್ತ 18 ರಿಂದ 40 ವರ್ಷ ವಯೋಮಿತಿಯೊಳಗಿನ ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಅದ್ಯತೆಯನ್ನು ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 20ರೊಳಗಾಗಿ ಸದಸ್ಯ ಕಾರ್ಯದರ್ಶಿ, ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು–560056 ಇಲ್ಲಿಗೆ ಮುದ್ರಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ಮೂಲಕ ಸಲ್ಲಿಸಲು ಕೋರಿದೆ.

ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ, ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಇಲಾಖೆಯು ಯಾವುದೇ ಭತ್ಯೆ ನೀಡಲಾಗುವುದಿಲ್ಲ.

ಅರ್ಜಿ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kannadasiri.karnataka.gov.in ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಸಿ. ಬಸವಲಿಂಗಯ್ಯ(ವಚನ ಕಲ್ಯಾಣ ನಾಟಕದ ನಿರ್ದೇಶಕರು) ಮೊಬೈಲ್ ಸಂಖ್ಯೆ– 9448538620ಯನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು.ಮಿರ್ಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಇಂಧನ ಸರಬರಾಜು : ಆಹಾರ ಇಲಾಖೆ ಸ್ಪಷ್ಟನೆ



ತುಮಕೂರು: ಪ್ರಸ್ತುತ ಜಾಗತಿಕ ರಾಜಕೀಯ ಪರಿಸ್ಥಿತಿಗಳಿಂದ ಇಂಧನ ಸರಬರಾಜಿನಲ್ಲಿ ಅಲ್ಪ ಪ್ರಮಾಣದಲ್ಲಿ ವ್ಯತ್ಯಾಸ ಉಂಟಾಗಿರುತ್ತದೆ. ಆದರೆ, ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳು ಸಾಕಷ್ಟು ದಾಸ್ತಾನು ಇದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗುವ ಅವಶ್ಯಕತೆ ಇರುವುದಿಲ್ಲ. ತೈಲ ಕಂಪನಿಗಳಿಂದ ಅಡುಗೆ ಅನಿಲ ಸಿಲಿಂಡರ್‌ಗಳು ಸರಬರಾಜು ಆಗುತ್ತಿದ್ದು, ಸಾರ್ವಜನಿಕರು ಯಾವುದೇ ಗಾಳಿ ಸುದ್ದಿಗಳಿಗೆ ಕಿವಿಗೊಡಬಾರದು ಎಂದು ಆಹಾರ ಇಲಾಖೆ ಜಂಟಿ ನಿರ್ದೇಶಕಿ ಸೌಮ್ಯ ತಿಳಿಸಿದ್ದಾರೆ.

ಕೇಂದ್ರ ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಸಚಿವಾಲಯವು ತೈಲ ಶೋಧನಾ ಘಟಕಗಳಿಗೆ ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಎಲ್.ಪಿ.ಜಿ.ಉತ್ಪಾದನೆಯನ್ನುಹೆಚ್ಚಿಸಲು ಮತ್ತು ಆ ಹೆಚ್ಚುವರಿ ಉತ್ಪಾದನೆಯನ್ನು ಗೃಹೋಪಯೋಗಿ ಎಲ್.ಪಿ.ಜಿ. ಬಳಕೆಗೆ ಬಳಸುವಂತೆ ಆದೇಶಿಸಿರುತ್ತದೆ.

ಕೇಂದ್ರ ಸಚಿವಾಲಯವು ಗೃಹೋಪಯೋಗಿ ಎಲ್.ಪಿ.ಜಿ. ಸರಬರಾಜಿಗೆ ಆದ್ಯತೆ ನೀಡಿರುತ್ತದೆ. ಅಕ್ರಮ ಸಂಗ್ರಹಣೆ ಹಾಗೂ ಕಾಳಸಂತೆ ಮಾರಾಟ ತಡೆಯಲು ಅಡುಗೆ ಅನಿಲ ಸಿಲಿಂಡರ್‌ಗಳ ರಿಫಿಲ್ಲಿಂಗ್ ಬುಕ್ಕಿಂಗ್‌ಗಳ ನಡುವೆ 25 ದಿನಗಳ ಅವಧಿ ನಿಗದಿಪಡಿಸಿದೆ. ತೈಲ ಕಂಪನಿಗಳ ಅಧಿಕಾರಿಗಳ ಮಾಹಿತಿಯಂತೆ ದೇಶದಾದ್ಯಂತ ವಾಣಿಜ್ಯ ಬಳಕೆಯ ಅನಿಲ ಸಿಲಿಂಡರ್‌ಗಳ ಸರಬರಾಜು ಸ್ಥಗಿತಗೊಂಡಿರುತ್ತದೆ. ಆಮದು ಮಾಡಿಕೊಳ್ಳುವ ಎಲ್.ಪಿ.ಜಿ.ಯನ್ನು ವಾಣಿಜ್ಯ ಬಳಕೆಗಾಗಿ ಆಸ್ಪತ್ರೆ, ಶಿಕ್ಷಣ ಸಂಸ್ಥೆಗಳಿಗೆ ಸರಬರಾಜಿಗೆ ಆದ್ಯತೆ ನೀಡಲಾಗುತ್ತಿದೆ. ರೆಸ್ಟೋರೆಂಟ್, ಹೋಟೆಲ್ ಮತ್ತು ಇತರೆ ಕೈಗಾರಿಕೆಗಳಿಗೆ ಎಲ್.ಪಿ.ಜಿ. ನೀಡುವ ಬಗ್ಗೆ ತೈಲ ಕಂಪನಿಗಳ ಅಧಿಕಾರಿಗಳ ಸಮನ್ವಯ ಸಮಿತಿಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು.

ಗೃಹೋಪಯೋಗಿ ಅನಿಲ ಸಿಲಿಂಡರ್‌ಗಳನ್ನು ವಾಣಿಜ್ಯ ಬಳಕೆಗಾಗಿ ಮಾರ್ಗಾಂತರ ಮಾಡುತ್ತಿರುವುದು ಕಂಡು ಬಂದಲ್ಲಿ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಬ್ರಹ್ಮ ಗೀಚಿದ್ದು ಹೀಗೇನಾ...? ಅಂತರ್ಯಾಮಿಯ ಅಂತರಾಳ

ಸೂರ್ಯಪ್ರಗತಿ ನ್ಯೂಸ್.ಕಾಂ

ಗೀಚಿದ್ದೇ ಗೀಚೋ ಬ್ರಹ್ಮ ಅಂತ ಹೇಳ್ಕೊಂಡು ತೆರೆ ಮೇಲೆ ಕಾಣಿಸಿಕೊಳ್ಳುವ ಚಿತ್ರದ ನಾಯಕ ರೀಲ್ಸ್ ಲೋಕದಲ್ಲೇ ತೇಲುತ್ತಿದ್ದ ಕಥಾನಾಯಕಿಯ ಹಾಟ್ ಸ್ಪಾಟ್ ಕನೆಕ್ಟ್ ಮಾಡಿಕೊಳ್ಳುವ ಬರದಲ್ಲಿ ಹುಡುಗಿಯ ಹಾರ್ಟ್ ಬೀಟ್‌ನನ್ನೇ ಕೆನೆಕ್ಟ್ ಮಾಡಿಕೊಳ್ಳುತ್ತಾನೆ. ಮೊಬೈಲ್ ಸ್ಕ್ರೀನ್ ನಿಂದ ಬಿಗ್ ಸ್ಕ್ರೀನ್ ಗೆ ಬೆಳೆಯುವ ಆಸೆ ಹೊಂದಿರುವ ನಾಯಕಿ ರಾಣಿ ಪ್ರತಿನಿತ್ಯ ರೀಲ್ಸ್ ಲೈಕ್ ಕಮೆಂಟ್ ನೋಡಿ ಖುಷಿ ಪಡುವ ಮನಸ್ಸಿನವಳು. ಇದರಿಂದಲೇ ನಾನು ಸಾಧನೆ ಮಾಡುತ್ತೇನೆ ಎಂಬ ಗುರಿ ಇಟ್ಟುಕೊಂಡವಳು. ಈ ನಡುವೆ ನಾಯಕ ನಟ ನಾಯಕಿಯ ಮೇಲೆ ತೋರಿಸುವ ಅತೀಯಾದ ಕಾಳಜಿಯಿಂದ ಪ್ರೀತಿಯನ್ನೇ ದೂರ ಮಾಡಿಕೊಳ್ಳುತ್ತಾನೆ.



ಇನ್ನೊಂದೆಡೆ ಗುಜುರಿ ಷೆಡ್‌ನಲ್ಲಿ ಐವರನ್ನು ಕಟ್ಟಾಗಿ ವೆಜ್ ರೀತಿಯಲ್ಲಿ ಪ್ರತಿನಿತ್ಯ ಚಿತ್ರೆ ಹಿಂಸೆ ನೀಡುವ ಕಿಡ್ನಾಪರ್ ಚಿತ್ರ ಪ್ರೇಕ್ಷಕರಲ್ಲಿ ವಿಚಿತ್ರ ವ್ಯಕ್ತಿಯಂತೆ ಕಂಡರೂ ಆ ಸಮಯದಲ್ಲಿ ಪ್ರೇಕ್ಷಕರಿಗೆ ಕಚಗುಳಿ ಇಟ್ಟು ನಗಿಸುವಲ್ಲಿ ಯಶಸ್ವಿಯಾಗಿದ್ದಾನೆ. ಈ ನಡುವೆ ಬಂದು ಹೋಗುವ ಡಾಕ್ಟರ್, ದುಬೈ ಶೇಖ್ ಇವರ ಸಂಭಾಷಣೆಗಳು ಏನೋ ಕಾನೂನು ಬಾಹಿರ ಚಟುವಟಿಕೆ ಮಾಡುತ್ತಿದ್ದಾರೆ ಎಂದೆನಿಸಿದರೂ ಮತ್ತದೇ ಕೌತುಕ ಉಳಿದುಕೊಳ್ಳುತ್ತದೆ. ಇಲ್ಲೊಂದು ಬ್ರೇಕ್ ಕೊಟ್ಟು ಮುಂದುವರಿಯುವ ಕಥೆ ಒಂದು ಸಿಂಗಿಂಗ್ ರಿಯಾಲಿಟಿ ಶೋ ಗೋಸ್ಕರ ನಡೆಯುವ ಆಡಿಷನ್ ನಲ್ಲಿ ಬಂದು ಹೋಗುವ ಅಭ್ಯರ್ಥಿಗಳು ಪ್ರೇಕ್ಷಕರನ್ನು ರಂಜಿಸುತ್ತಾರೆ. ಇದೇ ಆಡಿಷನ್ ನಲ್ಲಿ ಅಭ್ಯರ್ಥಿಯಾಗಿ ಪಾಲ್ಗೊಂಡ ಕಥಾನಾಯಕಿ ರಾಣಿ ಸೆಲೆಕ್ಟ್ ಆಗಿ ಉತ್ತಮ ಪ್ರಶಂಸೆಯನ್ನು ಪಡೆದು ಸ್ಪರ್ಧೆಯಲ್ಲಿ ಗೆಲ್ಲುವ ಭರವಸೆಯನ್ನು ಹುಟ್ಟಿಸುತ್ತಾಳೆ. ಆದರೆ ರಿಯಾಲಿಟಿ ಶೋ ನ ಕ್ರಿಯೇಟೀವ್ ಹೆಡ್ ಹೇಳಿಕೊಡುವ ಸೆಂಟಿಮೆಂಟಲ್ ಡೈಲಾಗ್‌ಗಳನ್ನೂ, ಜನರ ಅನುಕಂಪ ಪಡೆಯುವ ಮಾತುಗಳನ್ನು ಕಣ್ಣೀರಾಕುತ್ತಾ ಹೇಳು ಎನ್ನುವ ಮಾತಿಗೆ ರಾಣಿ ತೋರುವ ನಿರಾಕರಣೆಯಿಂದಾಗಿ ರಾಣಿ ಸ್ಪರ್ಧೆಯಿಂದಲೇ ಹೊರಬೀಳುತ್ತಾಳೆ. ಇದು ರೀಯಾಲಿಟಿ ಶೋಗಳ ರಿಯಾಲಿಟಿ ಜಗತ್ತು ತೋರಿಸುತ್ತದೆ. ರಿಯಾಲಿಟಿ ಶೋಗಳು ಟಿಆರ್‌ಪಿ ಗಾಗಿ ಅಮಾಯಕ ಮುಗ್ದ ಜೀವಗಳನ್ನು ಬಳಸಿಕೊಂಡು ಬಿಸಾಡುವ ಒಂದು ಹೇಯ ಕೃತ್ಯವನ್ನು ಈ ದೃಶ್ಯ ಬಯಲು ಮಾಡುತ್ತದೆ. ಮುಗ್ದ ಜೀವಿಗಳಿಗೆ ಸೆಲೆಬ್ರೆಟಿ ಪೀಲ್ ಕೊಟ್ಟು ಆಮೇಲೆ ಸಾಮಾನ್ಯನಂತೆಯೂ ಕೂಡ ಬದಕಲು ಸಾಧ್ಯವಾಗದ ಸ್ಥಿತಿಗೆ ತಲುಪಿಸುವ ರಿಯಾಲಿಟಿ ಶೋಗಳ ಮುಖವಾಡದ ಹಿಂದಿನ ಖರಾಳ ಮುಖವನ್ನ ಯಾವುದೇ ಅಂಜಿಕೆಯಿಲ್ಲದೆ ತೆರೆದಿಡುತ್ತಾರೆ ಚಿತ್ರದ ನಿರ್ದೇಶಕರು.

ಇದರೊಟ್ಟಿಗೆ ಗುಜುರಿ ಷಡ್ ನಲ್ಲಿ ಕಟ್ಟಾಕಿದ್ದ ಐವರ ಫ್ಲಾಷ್ ಬ್ಯಾಕ್‌ಗಳನ್ನು ಹೇಳುತ್ತಾ ಇವರು ಮಾಡಿದ ತಪ್ಪುಗಳು, ಇಡುತ್ತಿರುವ ತಪ್ಪು ಹೆಜ್ಜೆಗಳನ್ನು ನೆನಪಿಸುತ್ತಾ ಇವರ ಮನಃ ಪರಿವರ್ತನೆ ಮಾಡುವ ಸಂಭಾಷಣೆಗಳಿಗೆ ಪ್ರೇಕ್ಷಕರು ಹೌದು ಎಂದು ತಲೆದೂಗುತ್ತಾರೆ. ಈ ಕಥೆ ಸಮಾಜದಲ್ಲಿ ಪ್ರತಿ ನಿತ್ಯ ನಡೆಯುತ್ತಿರುವ ಘಟನೆಯಾದ್ದರಿಂದ ಜನರ ಮನಸ್ಸಿಗೆ ಬಹು ಬೇಗ ನಾಟುತ್ತದೆ. ಇದರ ಜೊತೆಗೆ ಮನುಷ್ಯ ಸೋತುಗೆಲ್ಲುವುದನ್ನು ಅಭ್ಯಾಸ ಮಾಡಿಕೊಂಡಾಗ ಯಶಸ್ಸಿನ ರುಚಿ ದೊರೆಯುತ್ತದೆ ಎನ್ನುವ ಸಂದೇಶ ಎಲ್ಲರನ್ನು ಮುಟ್ಟುತ್ತದೆ.

ಮೊದಲ ಚಿತ್ರದಲ್ಲೇ ಭರವಸೆಯನ್ನು ಮೂಡಿಸಿರುವ ನಾಯಕ ಪ್ರಣವ್ ಹಾಗೂ ನಾಯಕಿ ಮೊಹಿರಾ ಆಚಾರ್ಯ ತಮ್ಮ ಅಮೋಘ ನಟನೆಯಿಂದಾಗಿ ಜನರ ಪ್ರೀತಿಯನ್ನು ಗಳಿಸಿದ್ದಾರೆ. ಈ ಸಿನಿಮಾವನ್ನು ಕೆ. ಧನಂಜಯ್ ನಿರ್ದೇಶನ ಮಾಡಿದ್ದು, ನವೀನ್ ಎನ್.ಜಿ ರವರು ಬಂಡವಾಳವನ್ನು ಹೂಡಿದ್ದರೆ, ಸಾಹಿತ್ಯನ್ನು ವಿನಯ್ ಕಾವ್ಯಕಾಂತಿ ರಚಿಸಿದ್ದಾರೆ, ಸಾಹಿತ್ಯಕ್ಕೆ ಸಂಗೀತ ಕೊಟ್ಟು ಚಿತ್ರದ ಗತಿಯನ್ನು ಹೆಚ್ಚಿಸಿದ ಸಂಗೀತ ನಿರ್ದೇಶಕ ದೇಶೀ ಮೋಹನ್ ಪಾತ್ರ ಅಮೋಘ.

ಒಟ್ಟಾರೆಯಾಗಿ ಈ ಚಲನಚಿತ್ರ ಸಾಮಾಜಿಕ ಮಾಧ್ಯಮಗಳಿಂದ ಬಳಲುತ್ತಿರುವ ಈ ಸಮಾಜಕ್ಕೆ ಉತ್ತಮ ಸಂದೇಶವನ್ನು ನೀಡುತ್ತದೆ. ಕುಟುಂಬ ಸಮೇತರಾಗಿ ನೋಡುವ ಸಿನಿಮಾ ಇದ್ದಾಗಿದ್ದು. ಈ ಸಿನಿಮಾಗೆ ಒಟ

ನಾಳೆ ನಗರಕ್ಕೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್: ಸಾಧಕರಿಗೆ ಸನ್ಮಾನ

ವೀರಶೈವ ಲಿಂಗಾಯತ ಮಹಾಸಭಾದಿಂದ ಮಹಿಳಾ ದಿನಾಚರಣೆ

ತುಮಕೂರು: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಜಿಲ್ಲಾಘಟಕ, ಜಿಲ್ಲಾ ಮಹಿಳಾ ಘಟಕ ಹಾಗೂ ವಿವಿಧ ಘಟಕಗಳ ಆಶ್ರಯದಲ್ಲಿ ಈ ತಿಂಗಳ 14ರಂದು ಶನಿವಾರನಗರದ ವೀರಶೈವಕಲ್ಯಾಣ ಮಂಟಪದಲ್ಲಿಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಇದರ ಅಂಗವಾಗಿ ಸಾಧಕರನ್ನುಗೌರವಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಹಾಸಭಾದ ಮಹಿಳಾ ಘಟಕದಜಿಲ್ಲಾಧ್ಯಕ್ಷೆ ಮಮತಾ ದಿವಾಕರ್ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ನಡೆಯುವಕಾರ್ಯಕ್ರಮದಲ್ಲಿ ಹಿರೇಮಠದಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹಾಗೂ ಬೆಳ್ಳಾವಿ ಕಾರದೇಶ್ವರ ಮಠದಕಾರದ ವೀರಬಸವ ಸ್ವಾಮೀಜಿ ದಿವ್ಯಸಾನಿಧ್ಯವಹಿಸುವರು.ಮಹಿಳಾ ಮತ್ತು ಮಕ್ಕಳ ಕಲ್ಯಾಣಾಭಿವೃದ್ಧಿ ಸಚಿವೆಲಕ್ಷ್ಮೀ ಹೆಬ್ಬಾಳ್ಕರ್ ಕಾರ್ಯಕ್ರಮಉದ್ಘಾಟಿಸುವರು.ಮಹಾಸಭಾ ಮಹಿಳಾ ಘಟಕರಾಷ್ಟ್ರೀಯಅಧ್ಯಕ್ಷೆ ವೀಣಾಕಾಶಪ್ಪನವರ್, ರಾಜ್ಯಾಧ್ಯಕ್ಷೆ ಮುಕ್ತಾಂಬ ಭಾಗವಹಿಸುವರು.

ಮಹಾಸಭಾರಾಜ್ಯಾಧ್ಯಕ್ಷ ಶಂಕರ ಮಹದೇವ ಬಿದರಿಅವರುಕ್ರೀಡಾ ವಿಜೇತರಿಗೆ ಬಹುಮಾನ ವಿತರಿಸಿದರೆ, ವಿ.ಸೋಮಣ್ಣ ಪ್ರತಿಷ್ಠಾನದ ಶೈಲಜಾ ಸೋಮಣ್ಣ ಸಾಧಕರನ್ನು ಸನ್ಮಾನಿಸುವರು. ಶಾಸಕ ಜಿ.ಬಿ.ಜ್ಯೋತಿಗಣೇಶ್, ಮಹಾಸಭಾರಾಜ್ಯ ಪ್ರಧಾನ ಕಾರ್ಯದರ್ಶಿ ಸಾಗರನಹಳ್ಳಿ ನಟರಾಜ್, ಜಿಲ್ಲಾಧ್ಯಕ್ಷ ಡಾ.ಎಸ್.ಪರಮೇಶ್ ಮತ್ತಿತರಗಣ್ಯರು ಭಾಗವಹಿಸುವರು. ಪ್ರಾಂಶುಪಾಲರಾದಡಾ.ಪ್ರೇಮಾ ಸಿದ್ದರಾಜು ಅವರು ಮಹಿಳಾ ಸಬಲೀಕರಣದ ಸವಾಲುಗಳು ಎಂಬ ವಿಷಯದಲ್ಲಿಉಪನ್ಯಾಸ ನೀಡುವರುಎಂದು ಮಮತಾ ದಿವಾಕರ್ ತಿಳಿಸಿದ್ದಾರೆ.

ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯತಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ತುಮಕೂರು: ಜಿಲ್ಲಾ ಮಕ್ಕಳ ರಕ್ಷಣಾ ಘಟಕವು 2024–25ನೇ ಸಾಲಿನ ಬಾಲ್ಯ ವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯತಿಗಳಿಗೆ(ಬಾಲ್ಯ ವಿವಾಹ ಮುಕ್ತ ಗ್ರಾಮ ಪಂಚಾಯತ್) ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಭರ್ತಿ ಮಾಡಿದ ನಿಗಧಿತ ಅರ್ಜಿ ನಮೂನೆಯನ್ನು ಮಾರ್ಚ್ 26ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮೊದಲನೇ ಮಹಡಿ, ಮಹಾತ್ಮಗಾಂಧಿ ಕ್ರೀಡಾಂಗಣ, ಕುವೆಂಪು ನಗರ, ತುಮಕೂರು ಇವರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಗೌತಮ್ ಎನ್., ರಕ್ಷಣಾಧಿಕಾರಿ, ಸಾಂಸ್ಥಿಕ ಸೇವೆ, ಮೊ.ಸಂ. 9964927371ನ್ನು ಸಂಪರ್ಕಿಸಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪವಿತ್ರ ಆರ್.ಜಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಓಟದಲ್ಲಿ ಪ್ರಥಮ ಬಹುಮಾನ



ವೈ.ಎನ್.ಹೊಸಕೋಟೆ : ಜಿಲ್ಲಾ ಕೇಂದ್ರದಲ್ಲಿ ಗುರುವಾರ ನಡೆದ ಕೇಂದ್ರ ಸರ್ಕಾರದ ಮೈ ಭಾರತ್–ಯುವಭಾರತ್ ನ ತುಮಕೂರು ಜಿಲ್ಲಾ ಮಟ್ಟದ ಕ್ರೀಡಾಕೂಟದ ಪುರುಷ ವಿಭಾಗದ 200 ಮೀಟರ್ ಓಟದಲ್ಲಿ ಹೋಬಳಿಯ ಮೇಗಳಪಾಳ್ಯ ಲಂಬಾಣಿಹಟ್ಟಿಯ ಪಿ.ನಂದೀಶ್ ನಾಯ್ಕ ಪ್ರಥಮ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಮೈ ಭಾರತ್–ಮೇರಾ ಯುವ ಭಾರತ್ ತುಮಕೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ತುಮಕೂರು ವಿಶ್ವವಿದ್ಯಾನಿಲಯ ಹಾಗೂ ಡಾ: ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ತುಮಕೂರು ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಕ್ರೀಡಾಕೂಟದಲ್ಲಿ ಶ್ರೀ ಸಿದ್ಧಾರ್ಥ ಪ್ರಥಮ ದರ್ಜೆ ಕಾಲೇಜಿನ ದ್ವಿತೀಯ ವರ್ಷದ ಪತ್ರಿಕೋದ್ಯಮ ವಿಭಾಗದಿಂದ ವಿದ್ಯಾರ್ಥಿ ಪಿ.ನಂದೀಶ್ ನಾಯ್ಕ ಪ್ರತಿನಿಧಿಸಿದ್ದರು. ಪ್ರಶಸ್ತಿ ಪತ್ರ ಮತ್ತು ಮೆಡಲ್ ಬಹುಮಾನ ನೀಡಲಾಗಿದೆ.

ಕಾಲೇಜಿನ ಪ್ರಾಂಶುಪಾಲರಾದ ಡಾ.ಪಿ. ಹೇಮಲತಾ, ಎಲ್ಲಾ ವಿಭಾಗದ ಮುಖ್ಯಸ್ಥರು, ಸಹಾಯಕ ಪ್ರಾಧ್ಯಾಪಕರು, ಆಡಳಿತ ಮಂಡಳಿ ಮತ್ತು ಪೋಷಕರು ವಿದ್ಯಾರ್ಥಿಯನ್ನು ಅಭಿನಂದಿಸಿದ್ದಾರೆ.

ಕಣ್ಣಿನ ದೃಷ್ಟಿ ಕಳೆದುಕೊಳ್ಳುತ್ತೀರಾ ಹುಷಾರ್..!

ಡಯಾಬಿಟಿಸ್ (ಮಧುಮೇಹ) ದೇಹದ ಹಲವಾರು ಅಂಗಗಳ ಮೇಲೆ ಪರಿಣಾಮ ಬೀರುತ್ತದೆ ಎಂಬುದು ಸಾಕಷ್ಟು ಮಂದಿಗೆ ತಿಳಿದೇ ಇರುತ್ತದೆ. ಆದರೆ, ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗುವುದರಿಂದ ಕಣ್ಣುಗಳಿಗೂ ಗಂಭೀರ ಹಾನಿ ಉಂಟಾಗಬಹುದು ಎಂಬುದನ್ನು ಅನೇಕರು ಗಮನಿಸುವುದಿಲ್ಲ.

ದೀರ್ಘಕಾಲ ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗಿದ್ದರೆ ಕಣ್ಣಿನ ರೆಟಿನಾದ ಸೂಕ್ಷ್ಮ ರಕ್ತನಾಳಗಳು ಹಾನಿಗೊಳಗಾಗಿ ಡಯಾಬಿಟಿಕ್ ರೆಟಿನೋಪತಿ, ಕಾಟರಾಕ್ಟ್ ಮತ್ತು ಗ್ಲೂಕೋಮಾ ಸಮಸ್ಯೆಗಳು ಉಂಟಾಗುವ ಸಾಧ್ಯತೆಗಳಿರುತ್ತವೆ.

ಆದರೆ, ಸಮಸ್ಯೆಯನ್ನು ಸರಿಯಾದ ಜೀವನಶೈಲಿ ಮತ್ತು ಕೆಲವು ಸರಳ ಅಭ್ಯಾಸಗಳ ಮೂಲಕ ದೂರಾಗಿಸಿಕೊಳ್ಳಬಹುದು.

ಕಣ್ಣುಗಳ ಆರೋಗ್ಯವನ್ನು ಕಾಪಾಡಿಕೊಳ್ಳಲು ಅತ್ಯಂತ ಮುಖ್ಯವಾದದ್ದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಸ್ಥಿರವಾಗಿ ಇರಿಸುವುದು. ಸಕ್ಕರೆ ಮಟ್ಟ ಹೆಚ್ಚು ಇದ್ದರೆ ರೆಟಿನಾದಲ್ಲಿರುವ ಸೂಕ್ಷ್ಮ ರಕ್ತನಾಳಗಳು ಹಾನಿಗೊಳಗಾಗುತ್ತವೆ. ಇದರಿಂದ ಮಸುಕಾದ ದೃಷ್ಟಿ, ರೆಟಿನಾದಲ್ಲಿ ದ್ರವ ಸೋರಿಕೆ, ರಕ್ತಪೂರೈಕೆ ಕಡಿಮೆಯಾಗುವುದು, ಕ್ರಮೇಣ ದೃಷ್ಟಿ ಹಾನಿಯಾಗುವ ಸಮಸ್ಯೆ ಎದುರಾಗುತ್ತದೆ.

ಎಸ್ಸಿ ಎಸ್ಟಿ ಹೆಚ್ಚಿನ ಮೀಸಲಾತಿ ಜಾರಿಗೆ ಆಗ್ರಹ:

ಮಹರ್ಷಿ ವಾಲ್ಮೀಕಿ ನಾಯಕ ಸಮಾಜದಿಂದ ಪ್ರತಿಭಟನೆ

ಸೂರ್ಯಪ್ರಗತಿ ನ್ಯೂಸ್.ಕಾಂ



ಗುಬ್ಬಿ: ರಾಜ್ಯದ ಎಸ್ಸಿ ಎಸ್ಟಿ ಸಮುದಾಯದ ಹಲವು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗುಬ್ಬಿ ತಾಲ್ಲೂಕು ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಮಾಜದಿಂದ ಪ್ರತಿಭಟನೆ ನಡೆಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಬೇಡಿಕೆ ಪತ್ರವನ್ನು ತಾಲ್ಲೂಕು ಆಡಳಿತ ಮೂಲಕ ಸಲ್ಲಿಸಿದರು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ತಾಲ್ಲೂಕು ಕಚೇರಿಗೆ ತಲುಪಿದ ವಾಲ್ಮೀಕಿ ನಾಯಕ ಸಮಾಜದ ಬಂಧುಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 2022 ರಲ್ಲಿ ಎಸ್ಸಿ ಜನಾಂಗ ಶೇಕಡಾ 15 ರಿಂದ 17 ಕ್ಕೆ ಏರಿಕೆ ಮಾಡಿದ್ದು, ಎಸ್ಟಿ ಜನಾಂಗಕ್ಕೆ ಶೇಕಡಾ 3 ರಿಂದ 7 ಕ್ಕೆ ಹೆಚ್ಚಳ ಮಾಡಿದ್ದಾರೆ. ಆದರೆ ಎರಡೂ ಸರ್ಕಾರಗಳು ವಿಳಂಬ ನೀತಿ ಅನುಸರಿಸುತ್ತಿದೆ. ಸಂವಿಧಾನದ 9 ನೇ ಅನುಸೂಚಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು.

ಮಹರ್ಷಿ ವಾಲ್ಮೀಕಿ ನಾಯಕ ಸಮಾಜದ ಮುಖಂಡ ರಾಮಚಂದ್ರಪ್ಪ ಮಾತನಾಡಿ ಕಳೆದ 70 ವರ್ಷದಿಂದಲೂ ಮೀಸಲಾತಿ ಹೆಚ್ಚಳಕ್ಕೆ ಬೇಡಿಕೆ ಇದ್ದರೂ ಈಗ ಹೆಚ್ಚಳ ಮಾಡಿ ಮೂಗಿಗೆ ತುಪ್ಪ ಸವರಿದಂತೆ ಸರ್ಕಾರಗಳು ನಿರ್ಲಕ್ಷ್ಯ ತೋರಿದೆ. 57 ಸಾವಿರ ಸರ್ಕಾರಿ ಹುದ್ದೆ ಭರ್ತಿಗೆ ಸರ್ಕಾರ ಮುಂದಾಗಿದೆ. ಹಳೆಯ ಮೀಸಲಾತಿ ಶೇಕಡಾ 3 ರಂತೆ 1600 ಹುದ್ದೆ ಮಾತ್ರ ದೊರೆಯಲಿದೆ. ಹೆಚ್ಚುವರಿ ಶೇಕಡಾ 7 ರಂತೆ ಭರ್ತಿ ಮಾಡಿದರೆ ಎಸ್ಟಿ ಜನಾಂಗಕ್ಕೆ 3 ಸಾವಿರಕ್ಕೂ ಅಧಿಕ ಹುದ್ದೆ ಸಿಗಲಿದೆ ಎಂದರು ವಿವರಿಸಿದರು.

ವಾಲ್ಮೀಕಿ ನಾಯಕ ಸಮಾಜದ ಮಹಿಳಾ ಘಟಕದ ಅಧ್ಯಕ್ಷೆ ಸೌಭಾಗ್ಯಮ್ಮ ಮಾತನಾಡಿ ಎಸ್ ಸಿಪಿ ಹಾಗೂ ಟಿಎಸ್ ಯೋಜನೆಯಲ್ಲಿ ಮೀಸಲಿದ್ದ ಹಣವನ್ನು ಬೇರೆ ಯೋಜನೆಗಳಿಗೆ ಬಳಸಲಾಗುತ್ತಿದೆ. ಸರ್ಕಾರ ನಮ್ಮ ಅಭಿವೃದ್ಧಿಯ ಉದ್ದೇಶದ ಹಣ ನಮ್ಮಗಳ ಉದ್ಧಾರಕ್ಕೆ ಮಾತ್ರ ಬಳಕೆಯಾಗಬೇಕು. ಜೊತೆಗೆ ಎಸ್ಸಿ ಎಸ್ಟಿ ಜಾತಿಗಳಿಗೆ ಶೇಕಡಾ 56 ರಷ್ಟು ಮೀಸಲಾತಿ ಪ್ರಮಾಣ ಹೆಚ್ಚುವವರೆಗೆ ನೇಮಕಾತಿ ಪ್ರಕ್ರಿಯೆ ಮಾಡಬಾರದು ಎಂದು ಒತ್ತಾಯಿಸಿದರು.

ವಾಲ್ಮೀಕಿ ನಾಯಕ ಸಮಾಜದ ಮುಖಂಡ ಜಿ.ಎಲ್. ರಂಗನಾಥ್ ಮಾತನಾಡಿ ರಾಜ್ಯ ಸರ್ಕಾರ 2022 ರಲ್ಲಿ ಮೀಸಲಾತಿ ಹೆಚ್ಚಳ ಮಾಡಿ ಈಗ ಜಾರಿಗೆ ತರಲು ಹಿಂದೇಟು ಹಾಕುತ್ತಿರುವುದು ಸರಿಯಲ್ಲ. ಸರ್ಕಾರಿ ಹುದ್ದೆ ಭರ್ತಿಗೆ ಮುಂದಾದ ಈ ವೇಳೆ ನಮ್ಮ ಮೀಸಲಾತಿ ಹಕ್ಕು ನಾವುಗಳು ಪ್ರತಿಪಾದಿಸಬೇಕಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಎಸ್ಸಿ ಎಸ್ಟಿ ಸಮಾಜದ ಬಗ್ಗೆ ಕಾಳಜಿ ವಹಿಸಿ ನಮ್ಮ ಹಕ್ಕೊತ್ತಾಯ ಈಡೇರಿಸಬೇಕು. ತಾಲ್ಲೂಕು ಆಡಳಿತ ಮೂಲಕ ಎರಡೂ ಸರ್ಕಾರಗಳಿಗೆ ಬೇಡಿಕೆ ಪತ್ರವನ್ನು ನೀಡುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಪಪಂ ಮಾಜಿ ಅಧ್ಯಕ್ಷ ಜಿ.ಎನ್. ಅಣ್ಣಪ್ಪಸ್ವಾಮಿ, ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಮಾಜದ ಗೌರವಾಧ್ಯಕ್ಷ ನರಸಿಂಹಮೂರ್ತಿ, ಅಧ್ಯಕ್ಷ ಅಡವೀಶಯ್ಯ, ಮುಖಂಡರಾದ ಲಕ್ಷ್ಮೀರಂಗಯ್ಯ, ರಾಘವೇಂದ್ರ, ನಾಗರಾಜು, ಲಕ್ಷ್ಮಣಪ್ಪ, ರಮೇಶ್, ಹೊಸಹಳ್ಳಿ ರಂಗನಾಥ್, ರವೀಶ್, ಹೇರೂರು ನಾಗಣ್ಣ, ರಾಧಮಣಿ ಇತರರು ಇದ್ದರು.

ಗ್ರಾಮೀಣಭಾಗದ ಜನರ ಆರೋಗ್ಯಕ್ಕಾಗಿ ಆಯುಷ್ಮಾನ್

ಆರೋಗ್ಯ ಕೇಂದ್ರ ಸ್ಥಾಪನೆ – ಶಾಸಕ ಸಿ.ಬಿ.ಸುರೇಶ್‌ಬಾಬು

ಸೂರ್ಯಪ್ರಗತಿ ನ್ಯೂಸ್.ಕಾಂ




ಚಿಕ್ಕನಾಯಕನಹಳ್ಳಿ:–ಗ್ರಾಮೀಣ ಭಾಗದ ಜನರಿಗಾಗಿ 65 ಲಕ್ಷ ವೆಚ್ಚದಲ್ಲಿ ಆಯುಷ್ಮಾನ್ ಆರೋಗ್ಯ ಮಂದಿರವನ್ನು ನಿರ್ಮಿಸಲಾಗುವುದು ಇದರಲ್ಲಿ ಜನತೆಗೆ ಗುಣಮಟ್ಟದ ಮೂಲಭೂತ ಸೌಕರ್ಯಗಳೊಂದಿಗೆ ತಪಸಾಣೆ, ಔಷಧ ವಿತರಣೆ ಹಾಗೂ ವಿವಿಧ ಆರೋಗ್ಯ ಸೇವೆಗಳನ್ನು ಈ ಮೂಲಕ ನೀಡಲಾಗುವುದು ಇದನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳುವಂತೆ ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ತಾಲ್ಲೂಕಿನ ಹಂದನಕೆರೆ ಹೋಬಳಿಯ ಚೌಳಕಟ್ಟೆ ಗ್ರಾಮಪಂಚಾಯಿತಿ ವ್ಯಾಪ್ತಿಯ ಹರೇನಹಳ್ಳಿ ಗೇಟ್‌ಬಳಿ ನೂತನ ಆಯುಷ್ಮಾನ್ ಆರೋಗ್ಯ ಮಂದಿರ ಕಟ್ಟಡ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು ತಾಲ್ಲೂಕಿನಲ್ಲಿರುವಂತಹ ಮೂರು ಉಪಕೇಂದ್ರಗಳ ಕಟ್ಟಡಕ್ಕೆ ಅನುಮೋದನೆ ದೊರಕಿದ್ದು ಅದರಂತೆ ಚೌಳಕಟ್ಟೆ, ಹಾಗೂ ಗೋಡೆಕೆರೆಯ ಸೋಮನಹಳ್ಳಿಗೆ ಮಂಜೂರಾಗಿದೆ ಈ ಹಿಂದೆ ಆರೋಗ್ಯ ಇಲಾಖೆಯ ಉಪಕೇಂದ್ರಗಳು ಎಂದು ಕರೆಯುತ್ತಿದ್ದ ಈ ಆಸ್ಪತ್ರೆಗಳನ್ನು ಇನ್ನು ಮುಂದೆ ಆಯುಷ್ಮಾನ್ ಆರೋಗ್ಯ ಮಂದಿರ ಎಂದು ಕರೆಯಲಾಗುವುದು ಎಂದ ಅವರು ನಮ್ಮ ಕ್ಷೇತ್ರದಲ್ಲಿ ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗುತ್ತಿದ್ದು 65ಲಕ್ಷ ವೆಚ್ಚದಲ್ಲಿ ಇಂದು ಗುದ್ದಲಿ ಪೂಜೆ ನೆರವೆರಿಸಿದ ಚೌಳಕಟ್ಟೆಯ ಈ ಆರೋಗ್ಯ ಮಂದಿರದಲ್ಲಿ ಸಾರ್ವಜನಿಕರಿಗೆ ಅಗತ್ಯವಾದ ಚಿಕಿತ್ಸೆ, ತಪಾಸಣೆ ಔಷಧಿ ವಿತರಣೆ ಎಲ್ಲ ಇದ್ದು ಇದನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಿ ನಿಮ್ಮ ಆರೋಗ್ಯದ ಬಗ್ಗೆ ಎಚ್ಚರವಹಿಸಿ ಆರೋಗ್ಯ ಹಾಳಾಗುವ ಮೊದಲು ಅದಕ್ಕೆ ಎಚ್ಚರಿಕೆ ವಹಿಸುವುದು ಸೂಕ್ತ ಅದ್ದರಿಂದ ನಿಮ್ಮ ಮನೆಯ ಗ್ರಾಮದ ಪರಿಸರವನ್ನು ಸ್ವಚ್ಚವಾಗಿಟ್ಟಿಕೊಳ್ಳಿ ಎಂದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್‌ನ ನಿರ್ದೇಶಕ ರಾಮಚಂದ್ರಯ್ಯ, ತಾಲ್ಲೂಕು ವೈದ್ಯಾಧಿಕಾರಿ ಡಾ॥ಅಜಯ್, ಹಂದನಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ॥ಶರತ್ ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು ಹಾಜರಿದ್ದರು.

ದಂಡಿನ ಮಾರಮ್ಮ ದೇವಿಯ ಬೆಳ್ಳಿ ಪಲ್ಲಕ್ಕಿ ಉತ್ಸವ

ಸೂರ್ಯಪ್ರಗತಿ ನ್ಯೂಸ್.ಕಾಂ



ಮಧುಗಿರಿ: ಪಟ್ಟಣದ ದಂಡಿನ ಮಾರಮ್ಮ ದೇವಿಯ ಬೆಳ್ಳಿ ಪಲ್ಲಕ್ಕಿ ಉತ್ಸವ ಮಧ್ಯರಾತ್ರಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಬುಧವಾರ ಸಂಜೆಯಿಂದಲೇ ರಾಜ್ಯ ಹಾಗೂ ಸೀಮಾಂಧ್ರ ಪ್ರದೇಶದ ವಿವಿಧ ಭಾಗಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ದಂಡಿನ ಮಾರಮ್ಮ ದೇವಾಲಯ ಮುಂಭಾಗ ಜಮಾಯಿಸಿ ಸರತಿ ಸಾಲಿನಲ್ಲಿ ನಿಂತು ಪೂಜೆ ಸಲ್ಲಿಸಿ, ಆರತಿ ಬೆಳಗಿದರು. ಮಧ್ಯರಾತ್ರಿ ದೇವಾಲಯದಿಂದ ದಂಡಿನ ಮಾರಮ್ಮ ಉತ್ಸವ ಮೂರ್ತಿಯನ್ನು ಮೆರವಣಿಗೆ ಮೂಲಕ ತಂದು ಬೆಳ್ಳಿ ಪಲ್ಲಕ್ಕಿ ಮೇಲೆ ಪ್ರತಿಷ್ಠಾಪಿಸಲಾಯಿತು. ಭಕ್ತರು ಬೆಳ್ಳಿ ಪಲ್ಲಕ್ಕಿಗೆ ಹೂವು, ಪುರಿ ಮತ್ತು ಬಾಳೆಹಣ್ಣು ಅರ್ಪಿಸಿ ಹರಕೆ ತೀರಿಸಿದರು.

ಬೆಳ್ಳಿ ಪಲ್ಲಕ್ಕಿ ಉತ್ಸವ ಆರಂಭವಾದಾಗ ಜಾತ್ರೆಯ ಆವರಣದಲ್ಲಿ ಬಣ್ಣ ಬಣ್ಣದ ಬೆಳಕಿನ ಚಿತ್ತಾರ ಮೂಡಿಸುವ ಆಕರ್ಷಕ ಸಿಡಿಮದ್ದಿನ ಪ್ರದರ್ಶನ ಎಲ್ಲರ ಮನಸೂರೆಗೊಂಡಿತು. ಸಿಡಿಮದ್ದಿನ ಪ್ರದರ್ಶನ ವೀಕ್ಷಿಸಲು ದೇವಾಲಯದ ಆವರಣದ ಸುತ್ತಲೂ ಸಾವಿರಾರು ಮಂದಿ ಜಮಾಯಿಸಿ ಸಿಡಿಮದ್ದಿನ ಚಿತ್ತಾರಗಳನ್ನು ವೀಕ್ಷಿಸಿ ಸಂಭ್ರಮಿಸಿದರು.

ಮಧ್ಯ ರಾತ್ರಿ ಜಾತ್ರೆಯಲ್ಲಿ ಉತ್ಸಾಹದಿಂದ ಓಡಾಡಿದ ಜನರು ಬೆಳ್ಳಿ ಪಲ್ಲಕ್ಕಿ ಉತ್ಸವದ ಸಂಭ್ರಮ ಕಣ್ಣುಂಬಿಕೊಂಡರು. ಬೇಸಿಗೆಯ ಧಗೆ ತಣಿಸಿಕೊಳ್ಳಲು ಕಲ್ಲಂಗಡಿ, ಐಸ್‌ಕ್ರೀಮ್, ಕಬ್ಬಿನ ಹಾಲು ಮತ್ತು ತಂಪು ಪಾನೀಯಗಳ ಮೊರೆ ಹೋದರು. ಜಾತ್ರೆಯಲ್ಲಿನ ಆಟೋಪಕರಣಗಳಲ್ಲಿ ಕುಳಿತು ಸಂಭ್ರಮಿಸಿದರು.

ಪಟ್ಟಣದ ಪ್ರಮುಖ ಬೀದಿ ಹಾಗೂ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ದಾನಿಗಳು ಜಾತ್ರೆಗೆ ಆಗಮಿಸಿದ ಭಕ್ತರಿಗೆ ಪ್ರಸಾದ ವಿತರಿಸಿದರು. ದನಗಳ ಜಾತ್ರೆಯಲ್ಲಿ ಉತ್ತಮ ರಾಸುಗಳ ರೈತರಿಗೆ ಬಹುಮಾನ ವಿತರಿಸಲಾಯಿತು.ಜಾತ್ರೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರು ಬಿಗಿಬಂದೋಬಸ್ತ್ ಕೈಗೊಂಡಿದ್ದರು.

ಉಪವಿಭಾಗಾಧಿಕಾರಿ ಗೊಟೋರು ಶಿವಪ್ಪ, ತಹಶೀಲ್ದಾರ್ ಶ್ರೀನಿವಾಸ್, ಡಿವೈಎಸ್‌ಪಿ ಮಂಜುನಾಥ್, ಸಿಪಿಐ ಹನುಮಂತರಾಯಪ್ಪ, ಮುಖಂಡರಾದ ಎಂ.ಜಿ. ಶ್ರೀನಿವಾಸ್ ಮೂರ್ತಿ, ಪ್ರಧಾನ ಅರ್ಚಕ ಅರುಣ್ ಇತರರಿದ್ದರು.

ಭಯವನ್ನು ಮೆಟ್ಟಿನಿಂತು ಸಮುದ್ರವಾಗಬೇಕು

ಸೂರ್ಯಪ್ರಗತಿ ನ್ಯೂಸ್.ಕಾಂ



ತಿಪಟೂರು: ಹೆಣ್ಣಿನಲ್ಲಿನ ಭಯವನ್ನು ಅವಳಿಗೆ ಬಳುವಳಿಯಾಗಿ ಕೊಡುತ್ತ ಬಂದಿರುವುದು ಹೆಣ್ಣೇ ಹೊರತು, ಗಂಡಲ್ಲ. ಮಹಿಳೆಯರು ತಮ್ಮಲ್ಲಿನ ದ್ವಂದ್ವ ಮತ್ತು ಭಯ ಬಿಟ್ಟು ಆತ್ಮವಿಶ್ವಾಸದಿಂದ ತಮ್ಮ ಗುರಿಯತ್ತ ಮುನ್ನಡೆಯಬೇಕು. ಭಯವನ್ನು ಮೆಟ್ಟಿನಿಂತು ಸಮುದ್ರವಾಗಬೇಕು ಎಂದು ರಾಜ್ಯ ಮಾಹಿತಿ ಆಯುಕ್ತೆ ಡಾ. ಮಮತಾ ಬಿ.ಆರ್. (ಐಎಎಸ್ ನಿವೃತ್ತ) ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಪಿಜೆ ಅಬ್ದುಲ್ ಕಲಾಂ ಸೆಮಿನಾರ್ ಹಾಲ್ ನಲ್ಲಿ ಬುಧವಾರ ಮಹಿಳಾ ಸಬಲೀಕರಣ ಕೋಶ ಮತ್ತು ಐಕ್ಯೂಎಸಿ ಸಹಯೋಗದೊಂದಿಗೆ ನಡೆದ ಅಂತರರಾಷ್ಟ್ರೀಯ ಮಹಿ